Editor & Publisher **JAMES**

www.amulyavani.co.in

Chief Editor **G.V.RAMARAO**

# ಅಮೂಲ್ಯ ವಾಣಿ

The Dare Truth

KARBIL/2022/82442

**AMULYA VANI** Bilingual Daily

Email : amulyavani12@gmail.com

ದ್ವಿಭಾಷಾ ದಿನಪತ್ರಿಕೆ

| Volume : 1 | Thursday, March 30, 2023 | Price : Rs. 3-00 | Pages : 4 | Issue : 258 |
| --- | --- | --- | --- | --- |
| ಸಂಪುಟ : 1 | ಗುರುವಾರ, ಮಾರ್ಚ್ 30, 2023 | ಬೆಲೆ : ರೂ. 3–00 | ಪುಟಗಳು : 4 | ಸಂಚಿಕೆ : 258 |

ARADHANA INFRASTRUCTURE
Class -1 Electrical Contractor & Water Supply
(Approved & Licensed by Govt. of Karnataka)
for BBMP, BESCOM, BWSSB, PWD, KSDB and KHB
CALL US
99864 21215
We also provide Best services in the following categories

# ಚುನಾವಣೆ ಎದುರಿಸಲು ಬಿಜೆಪಿ ಸನ್ನದ್ಧ: ಬೊಮ್ಮಾಯಿ



ಬೆಂಗಳೂರು, ಮಾರ್ಚ್ 29: ಮೇ 10 ನಡೆಯುಲಿರುವ ಚುನಾವಣೆ ಎದುರಿಸಲು ಬಿಜೆಪಿ ಸನ್ನದ್ಧವಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಬಿಜೆಪಿ ಬಲಿಷ್ಟ ಕೇಡರ್ ಇರುವ, ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಪಕ್ಷ. ಈಗಾಗಲೇ ಹಲವಾರು ಅಭಿಯಾನ ಮಾಡಿದೆ.ನಿರಂತರವಾಗಿ ಪಕ್ಷದ ಸಂಘಟನೆ ಮಾಡಿಕೊಂಡು ಬಂದಿದ್ದು, ಬೂತ್ ಮಟ್ಟದ ಅಭಿಯಾನ, ಮೋರ್ಚಾಗಳ ಸಮ್ಮೇಳನ, ಸಂಕಲ್ಪ ಯಾತ್ರೆ, ವಿಜಯ ಸಂಕಲ್ಪ ಯಾತ್ರೆ ಕೈಗೊಳ್ಳಲಾಗಿದೆ.ಚುನಾವಣೆ ಎದುರಿಸಲು ಎಲ್ಲಾ ತಯಾರಿ ಮಾಡಿಕೊಂಡಿದೆ ಎಂದರು.

ಜನತಾ ಜನಾರ್ದನ ನಮ್ಮ ಪರ

ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಿರುವ ಯೋಜನೆಗಳು, ಮೂಲಸೌಕರ್ಯಕ್ಕೆ ನೀಡಿರುವ ಅನುದಾನ, ರಾಜ್ಯ ಸರ್ಕಾರ ಕೈಗೊಂಡಿರುವ ಹಲವಾರು ಜನೋಪಯೋಗಿ ಕಾರ್ಯಕ್ರಮಗಳು, ರೈತಾಪಿ ವರ್ಗ, ಮಹಿಳೆಯರು, ಯುವಕರು, ಎಸ್ಸಿ ಎಸ್ಟಿ , ಒಬಿಸಿ ವರ್ಗಕ್ಕೆ, ಸಾಮಾಜಿಕವಾಗಿ, ಆರ್ಥಿಕವಾಗಿ ತೆಗೆದುಕೊಂಡ ತೀರ್ಮಾನಗಳು, ಬಡವರಿಗೆ ನೀಡಿರುವ ಪ್ರೋತ್ಸಾಹ, ಗ್ರಾಮೀಣ ಪ್ರದೇಶಗಳಲ್ಲಿ ನೀಡಿರುವ ಕುಡಿಯುವ ನೀರಿನ ಯೋಜನೆ, ಕೋವಿಡ್ ಸಂದರ್ಭದಲ್ಲಿ 10 ಕೆಜಿ ಅಕ್ಕಿ, ಸ್ತ್ರೀ ಸಾಮರ್ಥ್ಯ, ಸ್ವಾಮಿ ವಿವೇಕಾನಂದ ಯೋಜನೆ, ರೈತ ವಿದ್ಯಾ ನಿಧಿ, ಯೋಜನೆಗಳನ್ನು ನೀಡಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸಮುದಾಯಕ್ಕೆ ಮೀಸಲಾತಿ ಹೆಚ್ಚಳ, ಮಾಡಿದೆ. ಒಳಮೀಸಲಾತಿ ಹೆಚ್ಚಳ, ನೆನೆಗುದಿಗೆ ಬಿದ್ದ ಸಮಸ್ಯೆಗಳಿಗೆ ಪರಿಹಾರ, ಒಬಿಸಿ ಯಲ್ಲಿ ಬದಲಾವಣೆ ಜನಮಾನಸದಲ್ಲಿ ಪಕ್ಷ ಹಾಗೂ ಸರ್ಕಾರದ ಪರವಾಗಿ ಜನತಾ ಜನಾರ್ದನ ಇದೆ. ಈ ಬಾರಿ ನಮ್ಮ ಕೆಲಸಗಳ ಆಧಾರದ ಮೇಲೆ ಸಕಾರಾತ್ಮಕ ತೀರ್ಪನ್ನು ಕೇಳುತ್ತಿದ್ದೇವೆ. ಜನರ ಆಶೀರ್ವಾದ ನಮ್ಮ ಪರವಾಗಿದೆ ಎಂದರು.

ವಿರೋಧ ಪಕ್ಷದ ಆರೋಪ ಯಶಸ್ವಿಯಾಗಿಲ್ಲ

ವಿರೋಧ ಪಕ್ಷದವರು ಹಲವಾರು ಆರೋಪಗಳನ್ನು ಮಾಡಿದ್ದು ಅವರು ಮಾಡಿರುವ ಯಾವುದೇ ಆರೋಪ ಯಶಸ್ವಿ ಆಗಿಲ್ಲ. ಜನರ.ಮಧ್ಯೆ ನಿಂತಿಲ್ಲ. ಭ್ರಷ್ಟಾಚಾರದ ವಿಚಾರ ಸೇರಿದಂತೆ ಎಲ್ಲವೂ ಅವರಿಗೆ ತಿರುಗುಬಾಣವಾಗಿದೆ. ಅವರ ಮೇಲೆಯೇ ಭ್ರಷ್ಟಾಚಾರದ ಆರೋಪ ಕೇಳಿ ಬಂದಿದೆ. ನಮ್ಮ ಶಾಸಕರ ಮೇಲೆ ದಾಳಿ ಮಾಡಿರುವುದು, ನಾವು ಲೋಕಾಯುಕ್ತವನ್ನು ಬಲ ಪಡಿಸಿದ್ದರಿಂದ.ನ್ಯಾಯಸಮ್ಮತವಾಗಿ ಅಧಿಕಾರ ನೀಡಿದ್ದರಿಂದ ಶಾಸಕರ ವಿರುದ್ಧ ಪ್ರಕರಣ ದಾಖಲಾಗಿದೆ ಎಂದರು.

ಕಾಂಗ್ರೆಸ್ಸಿನ ಸಾಂಪ್ರದಾಯಿಕ ಮತ ಬ್ಯಾಂಕ್ ಸಂಪೂರ್ಣ ಛಿದ್ರ

ಕಾಂಗ್ರೆಸ್ಸಿನ ಸಾಂಪ್ರದಾಯಿಕ ಮತ ಬ್ಯಾಂಕ್ ಸಂಪೂರ್ಣ ಛಿದ್ರವಾಗಿದೆ.ಹೀಗಾಗಿ ಅವರು ಹತಾಶರಾಗಿ ಕೀಳುಮಟ್ಟದ ಹೇಳಿಕೆ ನೀಡುತ್ತಿದ್ದಾರೆ. ಅವರ ಕೀಳು ಮಟ್ಟದ ಭಾಷೆಯೇ ಅವರ ಹತಾಶೆಯನ್ನು ತೋರಿಸುತ್ತದೆ ಎಂದರು.

ಸಕಾರಾತ್ಮಕ ಪರಿಣಾಮ

ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಅವರು ರಾಜ್ಯದಲ್ಲಿನ ಕಳೆದ ಮೊಕರು ತಿಂಗಳು ಮಾಡಿರುವ ಪ್ರವಾಸ ಸಕಾರಾತ್ಮಕ ಪರಿಣಾಮ ಬೀರಿದೆ. 2023 ರ ಮೇ 13 ರಂದು ಸ್ಪಷ್ಟವಾದ ಬಹುಮತ ಭಾರತೀಯ ಜನತಾ ಪಕ್ಷಕ್ಕೆ ಸಿಗಲಿದೆ. ಮತ್ತೆ ನಮ್ಮ ಸರ್ಕಾರ 5 ವರ್ಷ ಆಡಳಿತ ಮಾಡುವುದರಲ್ಲಿ ಸಂಶಯವಿಲ್ಲ ಎಂದರು.

ಕಾಂಗ್ರೆಸ್ ವಿರುದ್ದ ಹಲವಾರು ಪ್ರಕರಣಗಳನ್ನು ದಾಖಲಿಸಿದ್ದೇವೆ.

ನಮ್ಮ ಪಕ್ಷದ ಯಾವುದೇ ಶಾಸಕರು ಕಾಂಗ್ರೆಸ್ ಹೋಗುವುದಿಲ್ಲ.ಎಲ್ಲರೂ ನಮ್ಮವರೇ ಯಾರೂ ವಲಸಿಗರಲ್ಲ. ಡಿಕೆಶಿ ಕರೆ ಮಾಡಿ ಟಿಕೆಟ್ ಕೊಡುವ ಭರವಸೆ ನೀಡಿದ್ದಾರೆ.

ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಆರಂಭವಾಗಲಿದೆ. ಶಾಸಕರ ವಿರುದ್ಧ ಕಾಂಗ್ರೆಸ್ ನಲ್ಲೂ ಅಸಮಾಧಾನ ಇದೆ ಎಂದರು.

## ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್‌ವೇ ಗರಿಷ್ಟ 100 ಕಿ.ಮೀ. ವೇಗಕ್ಕೆ ಅವಕಾಶ

ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್‌ವೇಯಲ್ಲಿ ಗರಿಷ್ಟ ವೇಗದ ಕುರಿತು ರಾಷ್ಟ್ರೀಯ ಹೆದ್ದಾರಿಯ ಯೋಜನಾ ನಿರ್ದೇಶಕ ಶ್ರೀಧರ್ ಮಾಹಿತಿ ನೀಡಿದ್ದಾರೆ. ಪ್ರಯಾಣಿಕರು ಗರಿಷ್ಟ ಎಷ್ಟು ವೇಗವಾಗಿ ಈ ಹೆದ್ದಾರಿಯಲ್ಲಿ ಸಂಚರಿಸಬಹುದು ಎಂದು ಅವರು ತಿಳಿಸಿದ್ದಾರೆ.

ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್‌ವೇಯಲ್ಲಿ ಪ್ರಯಾಣಿಕರು ಗಂಟೆಗೆ ಗರಿಷ್ಟ 100 ಕಿಲೋ ಮೀಟರ್ ವೇಗವಾಗಿ ಮಾತ್ರ ಪ್ರಯಾಣ ಮಾಡಬಹುದಾಗಿದೆ. ಈ ಹೆದ್ದಾರಿಯನ್ನು ಗರಿಷ್ಟ 100 ಕಿ.ಮೀ ವೇಗವಾಗಿ ಪ್ರಯಾಣಿಸುವಂತೆ ಮಾತ್ರ ವಿನ್ಯಾಸ ಮಾಡಲಾಗಿದೆ ಎಂದು ರಾಷ್ಟ್ರೀಯ ಹೆದ್ದಾರಿಯ ಯೋಜನಾ ನಿರ್ದೇಶಕ ಶ್ರೀಧರ್ ಹೇಳಿದ್ದಾರೆ. ಇನ್ನು ಎರಡೇ ಎರಡು ದಿನಗಳಲ್ಲಿ ವೇಗದ ಮಿತಿ 100 ಕಿಲೋ ಮೀಟರ್ ಎಂಬ ಬೋರ್ಡ್‌ಗಳನ್ನು ಈ ಹೆದ್ದಾರಿಯಲ್ಲಿ ಅಳವಡಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಯೋಜನೆ ರೂಪಿಸಿದೆ.

ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್‌ವೇಯಲ್ಲಿ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಅಧಿಕೃತ ಮಾಹಿತಿ ನೀಡಿದೆ. ಒಟ್ಟು 117 ಕಿಲೋ ಮೀಟರ್ ಉದ್ದದ ಮೇಲ್ಸೇತುವೆ ಮತ್ತು ಒಳಚರಂಡಿಯ ಸಮಸ್ಯೆಗಳನ್ನು ಬಗೆಹರಿಸಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಿಳಿಸಿದೆ. ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇಯ ಸುತ್ತಲಿನ ಹಳ್ಳಿಗಳಲ್ಲಿ ವಾಸಿಸುವ ಜನರ ಅನುಕೂಲಕ್ಕಾಗಿ ಸರ್ವಿಸ್ ರಸ್ತೆಗಳಿಗೆ ಉಚಿತ ಪ್ರವೇಶದ ಸಮಸ್ಯೆಯನ್ನೂ ಕೂಡ ಪರಿಹರಿಸಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಮಾಹಿತಿ ನೀಡಿದೆ. ಮಾರ್ಚ್ 2014 ರಲ್ಲಿ, ಕೇಂದ್ರ ಮೇಲ್ಮೈ ಸಾರಿಗೆ ಸಚಿವಾಲಯವು ದೇಶಾದ್ಯಂತ ಕೆಲವು ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸುವುದಾಗಿ ಘೋಷಿಸಿತ್ತು. ಈ ಪೈಕಿ ಬೆಂಗಳೂರು–ಮೈಸೂರು ಮಾರ್ಗವು ಸಹ ಒಂದಾಗಿತ್ತು. 2014ರಲ್ಲಿ ಯೋಜನೆಯ ಅಂದಾಜು ವೆಚ್ಚ 4,100 ಕೋಟಿ ರೂ.ಗಳಾಗಿದ್ದು, ಈಗ ಅದು ದುಪ್ಪಟ್ಟಾಗಿದೆ.

# ಆದಾಯಕ್ಕೂ ಮೀರಿದ ಆಸ್ತಿ ಪ್ರಕರಣ; ಶಾಸಕ ರೇಣುಕಾಚಾರ್ಯಗೆ ಸಂಕಷ್ಟ

ಬೆಂಗಳೂರು; ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹಾಗೂ ಹೊನ್ನಾಳಿ ಕ್ಷೇತ್ರದ ಬಿಜೆಪಿ ಶಾಸಕ ಎಂ. ಪಿ. ರೇಣುಕಾಚಾರ್ಯಗೆ ಸಂಕಷ್ಟ ಎದುರಾಗಿದೆ.

ಅವರು ತಮ್ಮ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣದ ಎಫ್‌ಐಆರ್ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಇದರಿಂದಾಗಿ ಶಾಸಕ ರೇಣುಕಾ ಚಾರ್ಯಗೆ ಕಾನೂನು ಹೋರಾಟದಲ್ಲಿ ಹಿನ್ನಡೆಯಾಗಿದ್ದು, ಯಾವುದೇ ಕ್ಷಣದಲ್ಲಿ ಅವರ ವಿರುದ್ಧ ವಿಚಾರಣಾ ನ್ಯಾಯಾಲ ಯಕ್ಕೆ ಅಂತಿಮ ವರದಿ ಸಲ್ಲಿಕೆ ಯಾಗಲಿದೆ. ರೇಣುಕಾ ಚಾರ್ಯ ಎಫ್‌ಐಆರ್ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಆಲಿಸಿದ ನ್ಯಾಯಮೂರ್ತಿ ಕೆ. ನಟರಾಜನ್ ಅವರಿದ್ದ ಏಕಸದಸ್ಯಪೀಠ ಮಂಗಳ ವಾರ ಈ ಆದೇಶ ನೀಡಿದೆ. ತನಿಖೆ ಮುಕ್ತಾಯವಾಗಿ ಅಂತಿಮ ವರದಿ ಸಿದ್ಧವಾಗಿದೆ ಎಂಬ ಲೋಕಾಯುಕ್ತರ ಪರ ವಾದವನ್ನು ಮಾನ್ಯ ಮಾಡಿರುವ ನ್ಯಾಯಾಲಯ, ಈ ಹಂತದಲ್ಲಿಪ್ರಕರಣವನ್ನು ರದ್ದುಗೊಳಿಸಲಾಗದು ಎಂದು ಹೇಳಿದೆ.

ಲೋಕಾಯುಕ್ತರ ವಾದವೇನು?; ಲೋಕಾಯುಕ್ತ ಪರ ವಾದಿಸಿದ್ದ ವಕೀಲರು, ನಿಯಮ ದಂತೆ ಲೋಕಾಯುಕ್ತ ಪೊಲೀಸರು ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಿದ್ದು, ತನಿಖೆ ಮುಕ್ತಾಯವಾಗಿ ಅಂತಿಮ ವರದಿ ಸಿದ್ಧವಾಗಿದೆ. ಆದರೆ ಅರ್ಜಿದಾರರು ಜನಪ್ರತಿನಿಧಿಯಾಗಿರುವುದರಿಂದ ಅಂತಿಮ ವರದಿ ಸಲ್ಲಿಕೆಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಮನವಿ ಮಾಡಲಾಗಿದೆ. ಸಕ್ಷಮ ಪ್ರಾಧಿಕಾರವಾದ ಸ್ಪೀಕರ್ ಅನುಮತಿ ನೀಡಿದ ಕೂಡಲೇ ಸಂಬಂಧಿಸಿದ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗುವುದು ಎಂದರು. ಅರ್ಜಿದಾರರ ಪರ ವಕೀಲರು, ನಿಯಮದ ಪ್ರಕಾರ ಎರಡನೇ ದೂರು ಊರ್ಜಿತವಾಗುವುದಿಲ್ಲ. ಹಾಗಾಗಿ ಎಫ್‌ಐಆರ್ ರದ್ದುಪಡಿಸಬೇಕು ಎಂದು ಕೋರಿದರು.

ಪ್ರಕರಣದ ಹಿನ್ನೆಲೆ ಏನು?; 2015ರ ಏಪ್ರಿಲ್ 28ರಂದು ಗುರುಪಾದಯ್ಯ ಮಠದ್ ಎಂಬುವರು ರೇಣುಕಾಚಾರ್ಯ ಆದಾಯಕ್ಕೂ ಮೀರಿದ ಅಕ್ರಮ ಆಸ್ತಿ ಗಳಿಸಿದ್ದಾರೆ, ಆ ಬಗ್ಗೆ ಸಮಗ್ರ ತನಿಖೆಗೆ ಆದೇಶ ನೀಡಬೇಕೆಂದು ದಾವಣಗೆರೆಯ ವಿಶೇಷ ಲೋಕಾಯುಕ್ತ ಕೋರ್ಟ್‌ನಲ್ಲಿ ಖಾಸಗಿ ದೂರು ಸಲ್ಲಿಸಿದ್ದರು. ಪ್ರಕರಣದ ಗಂಭೀರತೆಯನ್ನು ಮನಗಂಡ ಕೋರ್ಟ್, ದಾವಣಗೆರೆ ಲೋಕಾಯುಕ್ತ ಎಸ್‌ಪಿಗೆ ಸಿಆರ್‌ಪಿಸಿ ಸೆಕ್ಷನ್ 156 (3) ಅಡಿಯಲ್ಲಿಈ ಪ್ರಕರಣದ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಆದೇಶಿಸಿದ್ದರು. ಆಗ ರೇಣುಕಾ ಚಾರ್ಯ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್ ಮೊರೆ ಹೋಗಿದ್ದರು.

ತಾಂತ್ರಿಕ ಕಾರಣದಿಂದ ಹೈಕೋರ್ಟ್ ಪ್ರಕರಣ ರದ್ದು ಮಾಡಿತ್ತು. ಆನಂತರ ದೂರುದಾರರು ಮತ್ತೊಂದು ದೂರು ದಾಖಲಿಸಿದ್ದರು. ಅದರ ಆಧಾರದ ಮೇಲೆ ಲೋಕಾಯುಕ್ತ ಪೊಲೀಸರು, ಭ್ರಷ್ಟಾಚಾರ ತಡೆ ಕಾಯಿದೆ ಸೆಕ್ಷನ್ 13(1)(ಇ) ಅಡಿಯಲ್ಲಿಎಫ್‌ಐಆರ್ ದಾಖಲಿಸಿ ತನಿಖೆ ನಡೆಸಿ, ಅಂತಿಮ ವರದಿಯನ್ನೂ ಸಹ ಸಿದ್ಧಪಡಿಸಿದ್ದಾರೆ. ಅದರಲ್ಲಿ ರೇಣುಕಾಚಾರ್ಯ ವಿರುದ್ಧದ ಆರೋಪಗಳು ಸಾಬೀತಾದರೆ ಆಗ ಅವರು ನಿಜಕ್ಕೂ ಸಂಕಷ್ಟ ಎದುರಿಸಬೇಕಾಗುತ್ತದೆ. ಏಕೆಂದರೆ ಚುನಾವಣೆ ಕೂಡ ಸನ್ನಿಹಿತ ವಾಗಿರುವ ಈ ಸಂದರ್ಭದಲ್ಲಿ ಪ್ರಕರಣದಲ್ಲಿ ಏನಾದರೂ ಆದೇಶಗಳಾದರೆ ಅದು ಅವರ ರಾಜಕೀಯ ಭವಿಷ್ಯದ ಮೇಲೂ ಪರಿಣಾಮ ಬೀರಲಿದೆ. ಗುರುಪಾದಯ್ಯ ಮಠದ್ ಎಂಬುವರು ತಮ್ಮ ದೂರಿನಲ್ಲಿ ಎಂ. ಪಿ. ರೇಣುಕಾಚಾರ್ಯ ಮತ್ತು ಅವರ ಸಹೋದರ ಅಧಿಕಾರ ದುರುಪಯೋಗ ಮಾಡಿಕೊಂಡು ಅಕ್ರಮವಾಗಿ ಆಸ್ತಿಗಳಿಕೆ ಮಾಡಿದ್ದಾರೆ.

ಶಾಸಕರು, ಸಚಿವರಾಗಿದ್ದ ಸಂದರ್ಭದಲ್ಲಿ ಅಧಿಕಾರ ದುರುಪಯೋಗ ಮಾಡಿ ಕೊಂಡಿದ್ದಾರೆ. ಸಹೋದರರು, ಸಂಬಂಧಿಗಳ ಹೆಸರಿನಲ್ಲಿ ಬೇನಾಮಿ ಆಸ್ತಿ ಮಾಡಿದ್ದಾರೆ ಎಂದು ದೂರಿನಲ್ಲಿ ಆರೋಪವನ್ನು ಮಾಡಿದ್ದರು. ಎಂ. ಪಿ. ರೇಣುಕಾ ಚಾರ್ಯ 2004ರ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ 26.07 ಲಕ್ಷ ಆಸ್ತಿ, 2008ರ ಚುನಾವಣೆ ಸಂರ್ಭದಲ್ಲಿ 73.97 ಲಕ್ಷ ರೂ. ಆಸ್ತಿ, 2013ರ ಚುನಾವಣೆ ಸಂದರ್ಭದಲ್ಲಿ 4.95 ಕೋಟಿ ರೂ. ಆಸ್ತಿ ಘೋಷಣೆ ಮಾಡಿದ್ದಾರೆ. ವಾರ್ಷಿಕ ಆದಾಯ 27 ಲಕ್ಷ ರೂ., 8 ಎಕರೆ ಕೃಷಿ ಭೂಮಿ, ಐಷಾರಾಮಿ ಕಾರು ಇದೆ ಎಂದು ನಮೂದು ಮಾಡಿದ್ದಾರೆ. ಅಲ್ಪ ಅವಧಿಯಲ್ಲಿ ಇಷ್ಟೊಂದು ಆಸ್ತಿಗಳಿಸಲು ಹೇಗೆ ಸಾಧ್ಯ? ಈ ಬಗ್ಗೆ ತನಿಖೆ ಯಾಗಬೇಕು ಎಂದು ಮನವಿ ಮಾಡಿದ್ದರು.

## ಮೇ 10ಕ್ಕೆ ಚುನಾವಣೆ, ಮೇ 13ಕ್ಕೆ ಫಲಿತಾಂಶ

ರಾಜ್ಯ ವಿಧಾನಸಭಾ ಚುನಾವಣೆಗೆ ಮುಹೂರ್ತ ನಿಗದಿಯಾಗಿದ್ದು. ಕೇಂದ್ರ ಚುನಾವಣಾ ಆಯೋಗ ಸುದ್ದಿಗೋಷ್ಠಿ ಮೂಲಕ ಚುನಾವಣಾ ದಿನಾಂಕವನ್ನು ಘೋಷಣೆ ಮಾಡಿದೆ. ಮೇ 10ರಂದು ಚುನಾವಣೆ ನಡೆಯಲಿದ್ದು, 13 ರಂದು ಫಲಿತಾಂಶ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ಕರ್ನಾಟಕದ 224 ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಬೇಕಿದೆ. ಇನ್ನು ಚುನಾವಣಾ ದಿನಾಂಕ ಘೋಷಣೆಗೂ ಮೊದಲೇ ಕಾಂಗ್ರೆಸ್ 124 ಕ್ಷೇತ್ರದ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಇನ್ನು ಬಿಜೆಪಿ ಮತ್ತು ಜೆಡಿಎಸ್ ಸಹ ಅಬ್ಬರದ ಪ್ರಚಾರ ನಡೆಸುತ್ತಿವೆ.

## ಇಂದಿನಿಂದಲೇ ನೀತಿ ಸಂಹಿತೆ

ಕರ್ನಾಟಕ: ಕರ್ನಾಟಕ ರಾಜ್ಯದ 16ನೇ ವಿಧಾನಸಭಾ ಚುನಾವಣೆಯ ಪ್ರಯುಕ್ತ ಬುಧಾವಾರ ಇಂದಿಂದ ರಾಜ್ಯದಲ್ಲಿ ನೀತಿಸಂಹಿತೆ ಜಾರಿ ಆಗಿದೆ. ಕೇಂದ್ರ ಚುನಾವಣಾ ಆಯೋಗವು ಇಂದು ಬೆಳಗ್ಗೆ 11:30ಕ್ಕೆ ಕರ್ನಾಟಕ ವಿಧಾನಸಭೆಗೆ ಸಾರ್ವತ್ರಿಕ ಚುನಾವಣೆಯ ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಪ್ರಮುಖ ರಾಜಕೀಯ ಪಕ್ಷಗಳಾದ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಹಾಗೂ ಎಎಪಿ ಪಕ್ಷಗಳು ಕರ್ನಾಟಕ ಚುನಾವಣಾ ಅಖಾಡಕ್ಕೆ ಸಿದ್ಧತೆ ನಡೆಸುತ್ತಿದೆ. ಮತ್ತೊಂದೆಡೆ ಇಂದಿನಿಂದಲೇ ನೀತಿಸಂಹಿತೆ ಜಾರಿಯಾಗಿದ್ದು, ಈ ಹಿನ್ನೆಲೆಯಲ್ಲಿ ಸಿಎಂ ಬಸವರಾಜ ಬೊಮ್ಮಾಯಿಯವರ ಸರ್ಕಾರಿ ಕಾರ್ಯಕ್ರಮಗಳು ರದ್ದಾಗಿವೆ.

ಚುನಾವಣಾ ಆಯೋಗವು ಸುದ್ದಿಗೋಷ್ಠಿ ನಡೆಸಿದ್ದು, ಚುನಾವಣೆಯ ದಿನಾಂಕವನ್ನು ಘೋಷಣೆ ಮಾಡಿದೆ.

**2ನೇ ಪುಟಕ್ಕೆ**

# ಟಿಕೆಟ್ ಬೇಡಿಕೆ ಬೆನ್ನಲ್ಲೇ ತುಮಕೂರು ಬಿಜೆಪಿ ಉಪಾಧ್ಯಕ್ಷರಾಗಿ ಸಚಿವ ವಿ ಸೋಮಣ್ಣ ಪುತ್ರ ನೇಮಕ

ಬೆಂಗಳೂರು: ರಾಜ್ಯ ವಸತಿ ಸಚಿವ ವಿ ಸೋಮಣ್ಣ ಅವರು ಗೃಹ ಸಚಿವ ಅಮಿತ್ ಶಾ ಅವರನ್ನು ನವದೆಹಲಿಯಲ್ಲಿ ಭೇಟಿ ಮಾಡಿದ ಕೆಲವೇ ದಿನಗಳಲ್ಲಿ ಸೋಮಣ್ಣ ಅವರ ಪುತ್ರ ಅರುಣ್ ಅವರನ್ನು ತುಮಕೂರು ಬಿಜೆಪಿ ಘಟಕದ ಉಪಾಧ್ಯಕ್ಷರನ್ನಾಗಿ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ನೇಮಕ ಮಾಡಿ ಆದೇಶಿಸಿದ್ದಾರೆ. ಸಚಿವ ವಿ ಸೋಮಣ್ಣ ಅವರು ಚುನಾವಣೆಗೂ ಮುನ್ನ ತನ್ನದೆ ಪಕ್ಷದ ವಿರುದ್ಧ ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಚಿವರೊಂದಿಗೆ ಎರಡು ಸುತ್ತಿನ ಸಭೆ ನಡೆಸಿದ್ದಾರೆ. ಅಮಿತ್ ಶಾ ಕೂಡ ಸೋಮಣ್ಣ ಅವರನ್ನು ದೆಹಲಿಗೆ ಕರೆಸಿ ಸಮಾಧಾನ ಪಡಿಸಿದ್ದರು. ದೆಹಲಿಯಿಂದ ವಾಪಸಾದ ಬಳಿಕ ವಿ ಸೋಮಣ್ಣ ಪಕ್ಷದಲ್ಲೇ ಮುಂದುವರಿಯುವುದಾಗಿ ಘೋಷಿಸಿದ್ದರು.



ಕಾಂಗ್ರೆಸ್ ಸೇರ್ಪಡೆಯಾಗಲಿದ್ದಾರೆ ಎಂಬ ಊಹಾಪೋಹಗಳ ನಡುವೆಯೇ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸೋಮಣ್ಣ ತನಗೆ ಹಾಗೂ ಪುತ್ರ ಅರುಣ್‌ಗೆ ಟಿಕೆಟ್ ನೀಡಬೇಕೆಂದು ಒತ್ತಾಯಿಸಿದ್ದರು. ಮಗನಿಗೆ ಟಿಕೆಟ್ ನೀಡುವ ಬಗ್ಗೆ ಸ್ಪಷ್ಟತೆ ಇಲ್ಲ. ಆದರೆ ಪಕ್ಷದಲ್ಲಿ ವಿ ಸೋಮಣ್ಣ ಅವರಿಗೆ ಪ್ರಾಮುಖ್ಯತೆ ನೀಡಲು ಅರುಣ್ ಅವರನ್ನು ಉಪಾಧ್ಯಕ್ಷನಾಗಿ ನೇಮಿಸಲಾಗಿದೆ.

ಕಳೆದ ಕೆಲ ದಿನಗಳಿಂದ ಬಿಜೆಪಿ ಹಿರಿಯ, ಕಿರಿಯ ನಾಯಕರನ್ನು ತನ್ನತ್ತ ಸೆಳೆಯಲು ಕಾಂಗ್ರೆಸ್ ಭಾರೀ ಕಸರತ್ತು ನಡೆಸುತ್ತಿದೆ. ಕಾಂಗ್ರೆಸ್ ಆಪರೇಷನ್ ಹಸ್ತದ ಮೂಲಕ ಈಗಾಗಲೇ ಹಲವರನ್ನು ತನ್ನ ತೆಕ್ಕೆಗೆ ಸೆಳೆದು ಕೊಂಡಿದೆ. ಇತ್ತ, ಬಿಜೆಪಿ ಬಗ್ಗೆ ವಿ. ಸೋಮಣ್ಣ ಸಾಕಷ್ಟು ಮನಸ್ತಾಪಗಳನ್ನು ಹೊರಹಾಕಿದ್ದರು. ಇದು ಸಚಿವರಾದ ಅಶೋಕ್ ಮತ್ತು ವಿ.ಸೋಮಣ್ಣ ಮಧ್ಯೆ ಗೊಂದಲ ಸೃಷ್ಟಿಯಾದ ಹಿನ್ನೆಲೆ ಬೆಂಗಳೂರು ನಗರದ ನಾಗರಬಾವಿ ಬಳಿ ಬಿಜೆಪಿ ವಿಜಯಸಂಕಲ್ಪ ರಥಯಾತ್ರೆ ಅರ್ಧಕ್ಕೆ ನಿಂತಿದ್ದು ಭಾರೀ ವದಂತಿಗು ಸಾಕ್ಷಿಯಾಗಿತ್ತು. ಸದ್ಯ ಸಚಿವ ಸೋಮಣ್ಣ ತಾವು ಬಿಜೆಪಿಯಲ್ಲೇ ಮುಂದುವರೆಯುವುದಾಗಿ ಘೋಷಿಸಿದ್ದಾರೆ. ಹೀಗಾಗಿ ಮಗನನ್ನು ತುಮಕೂರು ಬಿಜೆಪಿ ಘಟಕದ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಅರುಣ್ ಬೆಂಗಳೂರಿನ ಗೋವಿಂದರಾಜನಗರ ಮತ್ತು ತುಮಕೂರಿನ ಗುಬ್ಬಿ ವಿಧಾನಸಭಾ ಕ್ಷೇತ್ರದಿಂದ ಟಿಕೆಟ್ ಆಕಾಂಕ್ಷಿಯಾಗಿದ್ದರು.

ಸೋಮಣ್ಣ ಅವರು ಚಾಮರಾಜನಗರ ವಿಧಾನಸಭಾ ಕ್ಷೇತ್ರವೊಂದರಲ್ಲಿ ತಮಗೇ ಟಿಕೆಟ್ ನೀಡುವಂತೆ ಕೋರಿದ್ದರು ಎನ್ನಲಾಗಿದೆ.

# ಗ್ರಾಮೀಣ ನೀರು ಸರಬರಾಜು: 363 ಮಿ. ಡಾಲರ್ ಸಾಲ ಅನುಮೋದಿಸಿದ ವಿಶ್ವಬ್ಯಾಂಕ್!

ಬೆಂಗಳೂರು: ವಿಶ್ವಬ್ಯಾಂಕ್‌ನ ಕಾರ್ಯನಿರ್ವಾಹಕ ಮಂಡಳಿಯು ಕರ್ನಾಟಕಕ್ಕೆ 363 ಮಿಲಿಯನ್ ಡಾಲರ್ ಸಾಲವನ್ನು ಅನುಮೋದಿಸಿದೆ. ಇದರಿಂದ ರಾಜ್ಯದ ಎರಡು ಮಿಲಿಯನ್ ಗ್ರಾಮೀಣ ಕುಟುಂಬಗಳಿಗೆ ಕೊಳವೆ ನೀರಿನ ಸಂಪರ್ಕದ ಮೂಲಕ ಅವರ ಮನೆಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಅನುಕೂಲವಾಗಲಿದೆ. ಸುಮಾರು 77 ಪ್ರತಿಶತದಷ್ಟು ಕರ್ನಾಟಕವು ಶುಷ್ಕ ಅಥವಾ ಅರೆ ಶುಷ್ಕವಾಗಿದ್ದು, ಹವಾಮಾನ ಬದಲಾವಣೆಗೆ ಸಂಬಂಧಿಸಿದಂತೆ ಅಸ್ಥಿರ ಮಳೆಯಿಂದಾಗಿ ಬರ ಮತ್ತು ಪ್ರವಾಹಗಳಿಗೆ ಗುರಿಯಾಗುತ್ತದೆ. ಅಂತರ್ಜಲ ಕುಸಿತ ಮತ್ತು ನೀರಿನ ಗುಣಮಟ್ಟ ಕ್ಷೀಣಿಸಲು ಕಾರಣವಾಗುತ್ತದೆ ಎಂದು ವಿಶ್ವ ಬ್ಯಾಂಕ್ ಹೇಳಿಕೆ ಬುಧವಾರ ತಿಳಿಸಿದೆ.

'ಹೀಗಾಗಿ, ಕರ್ನಾಟಕ ಸುಸ್ಥಿರ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮವು ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯನ್ನು ಬೆಂಬಲಿಸುತ್ತದೆ. ಈ ಕಾರ್ಯಕ್ರಮವು ರಾಜ್ಯದ ಪ್ರತಿ ಗ್ರಾಮೀಣ ಮನೆಗಳಿಗೆ ಟ್ಯಾಪ್ ನೀರಿನ ಸಂಪರ್ಕವನ್ನು ನೀಡುತ್ತದೆ' ಎಂದು ಅದು ಹೇಳಿದೆ.



ಇದು ಕುಡಿಯುವ ನೀರಿನ ವಿತರಣಾ ಜಾಲದ ನಿರ್ಮಾಣ ಮತ್ತು ಗ್ರಾಮೀಣ ಮನೆಗಳಲ್ಲಿ ನೀರಿನ ಮೀಟರ್‌ಗಳನ್ನು ಅಳವಡಿಸು ವುದನ್ನು ಒಳಗೊಂಡಿರುತ್ತದೆ. ಅಲ್ಲದೆ, ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಸುಮಾರು 10 ಮಿಲಿಯನ್ ಜನರಿಗೆ ಪ್ರಯೋಜನವನ್ನು ನೀಡುತ್ತದೆ ಎಂದಿದೆ. ಲಿಂಗ ಸಮಾನತೆಯು ಜಾಗತಿಕವಾಗಿ ಒಂದು ಪ್ರಮುಖ ವಿಷಯವಾಗಿದೆ. ಎಲ್ಲಾ ಗ್ರಾಮೀಣ ಮನೆಗಳಿಗೆ ಕೊಳವೆ ನೀರನ್ನು ಒದಗಿಸುವ ಭಾರತದ ಪ್ರಯತ್ನಗಳನ್ನು ಬೆಂಬಲಿಸಲು ವಿಶ್ವಬ್ಯಾಂಕ್‌ನ ಬದ್ಧತೆಯು ಈ ಸಮಸ್ಯೆಯನ್ನು ಪರಿಹರಿಸುವ ಮತ್ತು ಲಿಂಗ ಸಮಾನತೆಯನ್ನು ಉತ್ತೇಜಿಸುವ ಪ್ರಮುಖ ಹೆಜ್ಜೆಯಾಗಿದೆ ಎಂದು ವಿಶ್ವಬ್ಯಾಂಕ್‌ನ ಭಾರತ ದೇಶದ ನಿರ್ದೇಶಕ ಆಗಸ್ಟೆ ತಾನೋ ಕೌಮೆ ಹೇಳಿದರು.

ಮುಖ್ಯವಾಗಿ ಈ ಕಾರ್ಯಕ್ರಮವು ನೀರು ಸರಬರಾಜು ಸೇವೆಗಳನ್ನು ಸಮರ್ಥವಾಗಿ ನಿರ್ವಹಿಸುವ ಗ್ರಾಮೀಣ ಸ್ಥಳೀಯ ಸರ್ಕಾರಗಳ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಶುದ್ಧ ನೀರಿನಂತಹ ಮೂಲಭೂತ ಸೇವೆಗಳ ಪ್ರವೇಶವು ಮಹಿಳೆಯರ ಜೀವನದ ಮೇಲೆ ಗಮನಾರ್ಹ ಪರಿಣಾಮ ಬೀರುತ್ತದೆ. ಏಕೆಂದರೆ, ಅವರು ನೀರನ್ನು ತರುವ ದೊಡ್ಡ ಹೊರೆಯನ್ನು ಹೊಂದಿರುತ್ತಾರೆ. ಅವರೀಗ ಉತ್ತಮ ಆರೋಗ್ಯವನ್ನು ಹೊಂದಬಹುದು. ಶಿಕ್ಷಣ ಮತ್ತು ಔಪಚಾರಿಕ ಉದ್ಯೋಗಗಳಿಗೆ ಅವಕಾಶಗಳನ್ನು ಮುಂದುವರಿಸಲು ಹೆಚ್ಚಿನ ಸಮಯ ಸಿಗುತ್ತದೆ ಎಂದು ತಿಳಿಸಿದರು.

ಕರ್ನಾಟಕ ಕಳೆದ ದಶಕಗಳಲ್ಲಿ ಗ್ರಾಮೀಣ ನೀರು ಪೂರೈಕೆಯಲ್ಲಿ ಪ್ರಗತಿ ಸಾಧಿಸಿದ್ದರೂ, ಸ್ಥಳೀಯ ಮತ್ತು ಗ್ರಾಮ ಮಟ್ಟದಲ್ಲಿ

# ಬೆಂಗಳೂರು ಸುರಕ್ಷಿತ ನಗರ ಯೋಜನೆ ಯಶಸ್ವಿ ಅನುಷ್ಠಾನ: ಹನಿವೆಲ್

ಬೆಂಗಳೂರು: ಸ್ಮಾರ್ಟ್ ಮತ್ತು ಸಂಪರ್ಕಿತ ಸುರಕ್ಷತೆ ಮತ್ತು ಭದ್ರತಾ ತಂತ್ರಜ್ಞಾನದ ಮೂಲಕ ಮಹಿಳೆಯರು ಮತ್ತು ಹುಡುಗಿಯರಿಗೆ ಸುರಕ್ಷಿತ, ದಕ್ಷ ಮತ್ತು ಸಬಲೀಕರಣದ ವಾತಾವರಣವನ್ನು ಭದ್ರಪಡಿಸುವ ಗುರಿಯನ್ನು ಹೊಂದಿರುವ ಬೆಂಗಳೂರು ಸೇಫ್ ಸಿಟಿ ಯೋಜನೆಯ ಮೊದಲ ಹಂತವನ್ನು ಯಶಸ್ವಿಯಾಗಿ ಜಾರಿಗೆ ತಂದಿದ್ದೇವೆ ಎಂದು ಹನಿವೆಲ್ ಸಂಸ್ಥೆ ಮಂಗಳವಾರ ಪ್ರಕಟಿಸಿದೆ.



ಈ ಯೋಜನೆಯು ನಗರದೊಳಗೆ 3,000 ಕ್ಕೂ ಹೆಚ್ಚು ಆಯಕಟ್ಟಿನ ಸ್ಥಳಗಳಲ್ಲಿ 7,000 ಕ್ಕೂ ಹೆಚ್ಚು ವೀಡಿಯೊ ಕ್ಯಾಮೆರಾಗಳನ್ನು ಅಳವಡಿ ಸುವುದನ್ನು ಒಳಗೊಂಡಿದೆ. ಈ ಕ್ಯಾಮೆರಾಗಳು ಕೃತಕ ಬುದ್ಧಿಮತ್ತೆ (ಎಐ) ಶಕ್ತಗೊಂಡ ವ್ಯವಸ್ಥೆ ಗಳೊಂದಿಗೆ ಸುಸಜ್ಜಿತ ವಾಗಿದ್ದು, ಸಾರ್ವಜನಿಕ ಸ್ಥಳಗಳ ದೂರಸ್ಥ ಮೇಲ್ವಿಚಾರಣೆ ಮತ್ತು ಭವಿಷ್ಯದ ವಿಶ್ಲೇಷಣೆಗಾಗಿ ನೈಜ–ಸಮಯದ ಡೇಟಾ ಸಂಗ್ರಹಣೆಯ ಮೂಲಕ ಘಟನೆಗಳ ಪತ್ತೆ ಮತ್ತು ಪ್ರತಿಕ್ರಿಯೆ ಸಮಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ಸಂಸ್ಥೆ ಹೇಳಿಕೊಂಡಿದೆ. ಅಲ್ಲದೆ ಯೋಜನೆಯ ಹಂತ–2 ರಲ್ಲಿ, ಮೊಬೈಲ್ ಕಳ್ಳತನ, ಚೈನ್ ಸ್ನ್ಯಾಚಿಂಗ್, ಕಿರುಕುಳ ಮತ್ತು ಇತರ ಅಪರಾಧಗಳನ್ನು ನಿಯಂತ್ರಿಸಲು ಪೊಲೀಸರಿಗೆ ಸಹಾಯ ಮಾಡುವ ಸುಧಾರಿತ ತಂತ್ರಜ್ಞಾನ ಪರಿಹಾರಗಳನ್ನು ಕಂಪನಿಯು ನಿಯೋಜಿಸುತ್ತದೆ. ಮುಂದಿನ ಹಂತವು ಬೆಂಗಳೂರಿನ ನಾಗರಿಕರಿಗೆ ಹೆಚ್ಚು ತಡೆರಹಿತ ಮತ್ತು ಸಂಪರ್ಕಿತ ಸ್ಮಾರ್ಟ್ ಸಿಟಿ ಅನುಭವವನ್ನು ಸೃಷ್ಟಿಸಲು ಈ ವ್ಯವಸ್ಥೆಗಳು ಮತ್ತು ತಂತ್ರಜ್ಞಾನಗಳನ್ನು ಮತ್ತಷ್ಟು ಸಂಯೋಜಿಸುವತ್ತ ಗಮನಹರಿಸುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಹನಿವೆಲ್‌ನ ಬೆಂಗಳೂರು ಸೇಫ್ ಸಿಟಿ ಯೋಜನೆಯು ನಾಗರಿಕರ ಸುರಕ್ಷತೆ ಮತ್ತು ಸುರಕ್ಷತೆಯನ್ನು ಸುಧಾರಿಸಲು ತಂತ್ರಜ್ಞಾನವನ್ನು ಹೇಗೆ ಬಳಸಬಹುದು ಎಂಬುದಕ್ಕೆ ಉದಾಹರಣೆಯಾಗಿದೆ. ಅದೇ ಸಮಯದಲ್ಲಿ ನಗರ ನಿರ್ವಾಹಕರು ನೈಜ ಸಮಯದಲ್ಲಿ ಹೆಚ್ಚು ತಿಳುವಳಿಕೆಯುಳ್ಳ ಆಯ್ಕೆಗಳನ್ನು ಮಾಡಲು ಸಹಾಯ ಮಾಡುತ್ತದೆ. ನಗರ ಪೊಲೀಸರನ್ನು ತಾಂತ್ರಿಕವಾಗಿ ಅತ್ಯಾಧುನಿಕವಾಗಿ ಮಾಡಲು ಮತ್ತು ದಾಖಲೆಯ ಸಮಯದಲ್ಲಿ ಯೋಜನೆಯ ಮೊದಲ ಹಂತವನ್ನು ಪೂರ್ಣಗೊಳಿಸಲು ಹನಿವೆಲ್‌ನ ಸುಧಾರಿತ ತಂತ್ರಜ್ಞಾನ ಪರಿಹಾರಗಳನ್ನು ನಿಯೋಜಿಸಲು ನಾವು ಹೆಮ್ಮೆ ಪಡುತ್ತೇವೆ, "ಎಂದು ಹನಿವೆಲ್ ಇಂಡಿಯಾ ಮತ್ತು ಹನಿವೆಲ್ ಬಿಲ್ಡಿಂಗ್ ಟೆಕ್ನಾಲಜೀಸ್, ಏಷ್ಯಾದ ಅಧ್ಯಕ್ಷ ಆಶಿಶ್ ಮೋದಿ ಹೇಳಿದರು.

# ಎಎಪಿಗೆ ರಾಷ್ಟ್ರೀಯ ಪಕ್ಷದ ಸ್ಥಾನಮಾನ ನೀಡುವ ಕುರಿತು ಪರಿಶೀಲನೆ: ಚುನಾವಣಾ ಆಯೋಗ

ನವದೆಹಲಿ: ಆಮ್ ಆದ್ಮಿ ಪಕ್ಷಕ್ಕೆ ರಾಷ್ಟ್ರೀಯ ಪಕ್ಷದ ಸ್ಥಾನಮಾನ ನೀಡುವ ಕುರಿತು ಪರಿಶೀಲನೆ ನಡೆಸುತ್ತಿರುವುದಾಗಿ ಕೇಂದ್ರ ಚುನಾವಣಾ ಆಯೋಗ ಬುಧವಾರ ತಿಳಿಸಿದೆ.



ಇಂದು ನಡೆದ ಸುದ್ದಿಗೋಷ್ಠಿಯಲ್ಲಿ, ಎಎಪಿ ರಾಷ್ಟ್ರೀಯ ಪಕ್ಷದ ಸ್ಥಾನಮಾನ ನೀಡುವ ಕುರಿತು ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಅವರು, "ಇದು ಪರಿಶೀಲನೆಯಲ್ಲಿದೆ... ನಾವು ಶೀಘ್ರದಲ್ಲೇ ನಿಮಗೆ ಮಾಹಿತಿ ನೀಡುತ್ತೇವೆ" ಎಂದು ಹೇಳಿದರು. ಕಳೆದ ವರ್ಷ ಅರವಿಂದ್ ಕೇಜ್ರಿವಾಲ್ ನೇತೃತ್ವದ ಆಮ್ ಆದ್ಮಿ ಪಕ್ಷದ ಚುನಾವಣಾ ಸಾಧನೆಗಳು ಚುನಾವಣಾ ಆಯೋಗ ರಾಷ್ಟ್ರೀಯ ಪಕ್ಷವೆಂದು ಗುರುತಿಸಲು ದಾರಿ ಮಾಡಿಕೊಟ್ಟಿದೆ.

ರಾಷ್ಟ್ರೀಯ ಪಕ್ಷದ ಸ್ಥಾನಮಾನ ಪಡೆಯಲು, ಕನಿಷ್ಠ ನಾಲ್ಕು ರಾಜ್ಯಗಳಲ್ಲಿ ರಾಜ್ಯ ಪಕ್ಷವಾಗಿ ಗುರುತಿಸಲ್ಪಡಬೇಕು ಮತ್ತು ಆಯಾ ಶಾಸಕಾಂಗ ಸಭೆಗಳಲ್ಲಿ ಕನಿಷ್ಠ ಇಬ್ಬರು ಸದಸ್ಯರನ್ನು ಹೊಂದಿರಬೇಕು. ಎಎಪಿ ದೆಹಲಿ, ಪಂಜಾಬ್, ಗೋವಾ ಮತ್ತು ಗುಜರಾತ್ ನಲ್ಲಿ ರಾಜ್ಯ ಪಕ್ಷವಾಗಿ ಗುರುತಿಸಲ್ಪಟ್ಟಿದೆ.

# ಹೆಚ್ಚುವರಿ ಬಜೆಟ್ ಮಂಡಿಸಿರುವ ಬಿಬಿಎಂಪಿಗೆ ಸರ್ಕಾರದಿಂದ ಮತ್ತಷ್ಟು ಹೆಚ್ಚುವರಿ ಕಾಮಗಾರಿಯ ಹೊರೆ

ಬೆಂಗಳೂರು: ಬಿಬಿಎಂಪಿಯು ಈ ತಿಂಗಳ ಆರಂಭದಲ್ಲಿ ಹೆಚ್ಚುವರಿ ಬಜೆಟ್ ಅನ್ನು ಮಂಡಿಸಿದ್ದರೂ, ರಾಜ್ಯ ಸರ್ಕಾರವು ಹೆಚ್ಚಿನ ಕಾಮಗಾರಿಗಳನ್ನು ಅದರ ಮೇಲೆ ಹೊರಿಸಿದೆ. ಈ ಮೂಲಕ ನಾಗರಿಕ ಸಂಸ್ಥೆ ತನ್ನ ಆದಾಯದಲ್ಲಿ ಗಮನಾರ್ಹ ಕೊರತೆಯನ್ನು ಎದುರಿಸಲಿದೆ. ರಾಜ್ಯ ಸರ್ಕಾರವು ಅನುಮೋದಿಸಿದ ಪರಿಷ್ಕೃತ ಬಜೆಟ್ 11,524 ಕೋಟಿ ರೂಪಾಯಿಗಳಷ್ಟಿದೆ, ಅದು 577 ಕೋಟಿ ರೂಪಾಯಿಗಳ ಹೆಚ್ಚುವರಿ ಕಾಮಗಾರಿಗಳನ್ನು ಪರಿಚಯಿಸಿದೆ. ಇದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು (ಬಿಬಿಎಂಪಿ) ಹಣಕಾಸು ಯೋಜನೆಯ ಮೇಲೆ ಪರಿಣಾಮ ಬೀರುವ ನಿರೀಕ್ಷೆಯಿದೆ. ಆಂತರಿಕವಾಗಿ ಕೊರತೆಯನ್ನು ಮೂಲವಾಗಿಸಲು ನಾಗರಿಕ ಸಂಸ್ಥೆಯನ್ನು ಸಂಕಷ್ಟಕ್ಕೆ ತಳ್ಳುತ್ತದೆ.

ಮಾರ್ಚ್ 24 ರಂದು ನಗರಾಭಿವೃದ್ಧಿ ಇಲಾಖೆ (ಯುಡಿಡಿ) ದಿನಾಂಕದ ಆದೇಶದಂತೆ ಮಾರ್ಚ್ 2 ರಂದು ಮಂಡಿಸಿದ 2023 – 24 ರ ಹಣಕಾಸು ವರ್ಷದ ಬಿಬಿಎಂಪಿ ಬಜೆಟ್ ಅನ್ನು ಸರ್ಕಾರ ಅನುಮೋದಿಸಿದೆ. ಆದೇಶವು ನಾಗರಿಕ ಸಂಸ್ಥೆಗೆ ಬಜೆಟ್ ಗಾತ್ರವನ್ನು 367 ಕೋಟಿ ರೂ. ಮೂಲ ಬಜೆಟ್‌ನ ಭಾಗವಾಗಿದ್ದ 210 ಕೋಟಿ ರೂಪಾಯಿ ಮೌಲ್ಯದ ಕಾಮಗಾರಿಗಳನ್ನು ಕೈಬಿಡುವಂತೆ ಬಿಬಿಎಂಪಿಗೆ ಒತ್ತಾಯಿಸಲಾಗುತ್ತದೆ.

ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿಮಿಟೆಡ್ (ಃಖಘಒಐ) ರಾಜ್ಯ ಸರ್ಕಾರದ ಬಜೆಟ್‌ನ ಪ್ರಾಥಮಿಕ ಫಲಾನುಭವಿಯಾಗಿದ್ದು, ತ್ಯಾಜ್ಯ ವಿಲೇವಾರಿಗಾಗಿ 700 ಕೋಟಿ ರೂ.ಗಳಿಂದ 1,100 ಕೋಟಿ ರೂಪಾಯಿ ಮೀಸಲಿಡಲಾಗಿದೆ. ಈ ಅನುದಾನ ಹಂಚಿಕೆಯನ್ನು ಹೆಚ್ಚಿಸಲು ಸುಪ್ರೀಂ ಕೋರ್ಟ್, ಹೈಕೋರ್ಟ್ ಮತ್ತು ರಾಷ್ಟ್ರೀಯ ಹಸಿರು ನ್ಯಾಯಮಂಡಳಿ (ಎನ್‌ಜಿಟಿ) ಆದೇಶಗಳನ್ನು ಜಾರಿಗೊಳಿಸುವ ಅಗತ್ಯವನ್ನು ಸರ್ಕಾರ ಉಲ್ಲೇಖಿಸಿದೆ. ಬಿಬಿಎಂಪಿಯ ಮೂಲ ಬಜೆಟ್‌ನಲ್ಲಿ ಮನೆ ಮತ್ತು ವಾಣಿಜ್ಯ ಸಂಸ್ಥೆಗಳಿಂದ ತ್ಯಾಜ್ಯ ಸಂಗ್ರಹಣೆ ಮತ್ತು ಸಾಗಣೆಗೆ ಮಾತ್ರ ಹಣ ಮೀಸಲಿಟ್ಟಿದೆ ಎಂದು ತಿಳಿದುಬಂದಿದೆ. ಬಿಬಿಎಂಪಿಯಿಂದ ಪ್ರತ್ಯೇಕವಾದ ಬಿಎಸ್‌ಡಬ್ಲ್ಯುಎಂಎಲ್ ಕೈಗೊಂಡಿರುವ ಕಾಮಗಾರಿಗಳಿಗೆ ಬೇರೆ ಯಾವುದೇ ನಿಧಿಯನ್ನು ಮಂಜೂರು ಮಾಡಿಲ್ಲ.




ಅಚ್ಚರಿಯೆಂದರೆ, ಪರಿಷ್ಕೃತ ಬಜೆಟ್‌ನಲ್ಲಿ ಮೇಯರ್ (150 ಕೋಟಿ ರೂ.), ಉಪಮೇಯರ್ (25 ಕೋಟಿ ರೂ.), ಮುಖ್ಯ ಆಯುಕ್ತರು (ರೂ. 75 ಕೋಟಿ), ಹಣಕಾಸು ಮತ್ತು ತೆರಿಗೆ ಸ್ಥಾಯಿ ಸಮಿತಿ (ರೂ. 25 ಕೋಟಿ), ಬೆಂಗಳೂರು ವಿವೇಚನೆಗೆ ಹೆಚ್ಚಿನ ಮೊತ್ತವನ್ನು ನಿಗದಿಪಡಿಸಲಾಗಿದೆ. ಅಭಿವೃದ್ಧಿ ಸಚಿವರು (250 ಕೋಟಿ ರೂ.) ಇದು 575 ಕೋಟಿ ರೂ.ಗಳಾಗಿದ್ದು ಇದು ಬಿಬಿಎಂಪಿಯ ಮೂಲ ಹಂಚಿಕೆಯಾದ 400 ಕೋಟಿ ರೂ.ಗಿಂತ ಗಮನಾರ್ಹವಾಗಿ ಹೆಚ್ಚಾಗಿದೆ. ಇನ್ನು ಬಿಬಿಎಂಪಿ ಚುನಾವಣೆ ಮುಂದೂಡಿದರೆ ಮೇಯರ್, ಉಪಮೇಯರ್ ಹಾಗೂ ಸ್ಥಾಯಿ ಸಮಿತಿಗೆ ಮೀಸಲಿಟ್ಟಿರುವ ವಿವೇಚನಾ ನಿಧಿಯನ್ನು ಬಿಬಿಎಂಪಿ ಆಡಳಿತಾಧಿಕಾರಿ, ಹಿರಿಯ ಐಎಎಸ್ ಅಧಿಕಾರಿ ನಿಯಂತ್ರಿಸುತ್ತಾರೆ. ವಿವೇಚನಾ ನಿಧಿಗಳನ್ನು ಹೇಗೆ ಬಳಸಿಕೊಳ್ಳಲಾಗಿದೆ ಎಂಬುದರ ಕುರಿತು ಬಹಳ ಕಡಿಮೆ ಸಾರ್ವಜನಿಕ ದಾಖಲೆಗಳು ಅಸ್ತಿತ್ವದಲ್ಲಿವೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) 2023–24ನೇ ಸಾಲಿಗೆ 11,000 ಕೋಟಿ ರೂಪಾಯಿ ಬಜೆಟ್ ಮಂಡಿಸಿದೆ. ಮುಂಬರುವ ಆರ್ಥಿಕ ವರ್ಷದ ಬಜೆಟ್ ಅಂದಾಜಿನಲ್ಲಿ ಬಿಬಿಎಂಪಿ ಮೂಲಸೌಕರ್ಯ ಅಭಿವೃದ್ಧಿ ಮತ್ತು ಉನ್ನತೀಕರಣಕ್ಕೆ ಆದ್ಯತೆ ನೀಡಿದೆ. ಬೆಂಗಳೂರು ನಗರದ ವಿವಿಧ ಭಾಗಗಳಲ್ಲಿ ಏಳು ಹೊಸ ಮೇಲ್ಸೇತುವೆಗಳು ಸೇರಿದಂತೆ 16 ಮೇಲ್ಸೇತುವೆಗಳನ್ನು ನಿರ್ಮಿಸಲು ಬಿಬಿಎಂಪಿ 1,650 ಕೋಟಿ ರೂಪಾಯಿಗಳನ್ನು ಒದಗಿಸಿದೆ.

# ಮಾಡಾಳ್ ವಿರೂಪಾಕ್ಷಪ್ಪ ವಿರುದ್ಧ ಎಸ್‌ಐಟಿ ತನಿಖೆ, ಅರ್ಜಿ ವಾಪಸ್!

ಬೆಂಗಳೂರು; ಲಂಚ ಪ್ರಕರಣದಲ್ಲಿ ಸಿಕ್ಕಿಬಿದ್ದಿರುವ ಚನ್ನಗಿರಿಯ ಬಿಜೆಪಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ವಿರುದ್ಧ ಎಸ್‌ಐಟಿ ತನಿಖೆ ಕೋರಿ ಕರ್ನಾಟಕ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿತ್ತು. ದಾವಣಗೆರೆಯ ಶ್ರೀರಾಮಸೇನೆ ಘಟಕ ಸಲ್ಲಿಸಿದ್ದ ಪಿಐಎಲ್ ಮುಖ್ಯ ನ್ಯಾಯಮೂರ್ತಿ ಪಿ. ಬಿ. ವರಳೆ ನೇತೃತ್ವದ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು. ಕೆಲ ಕಾಲ ಅರ್ಜಿದಾರರ ವಾದ ಆಲಿಸಿದ ನ್ಯಾಯಪೀಠ, ತನಿಖಾಧಿಕಾರಿ ವರ್ಗಾವಣೆಯಾದ ಕೂಡಲೇ ತನಿಖೆಯಲ್ಲಿ ಲೋಪವೆನ್ನಲಾಗದು. ಸರಿಯಾಗಿ ತನಿಖೆ ನಡೆದಿಲ್ಲವೆಂಬುದಕ್ಕೆ ಸಮರ್ಪಕ ಕಾರಣ ಉಲ್ಲೇಖಿಸಿಲ್ಲ. ತನಿಖೆಯಲ್ಲಿ ಲೋಪಗಳಿದ್ದರೆ ಅದನ್ನು ಸಕ್ಷಮ ಪ್ರಾಧಿಕಾರದ ಗಮನಕ್ಕೆ ತರಬಹುದು ಎಂದು ಅಭಿಪ್ರಾಯಪಟ್ಟಿತು.

ಆಗ ಅರ್ಜಿದಾರರ ಪರ ವಕೀಲರು, ವಿಚಾರವನ್ನು ಸಕ್ಷಮ




ಪ್ರಾಧಿಕಾರದ ಗಮನಕ್ಕೆ ತರುವುದಾಗಿ ಹೇಳಿ ಪಿಐಎಲ್ ವಾಪಸ್ ಪಡೆದರು. ಅದಕ್ಕೂ ಮುನ್ನ ಅರ್ಜಿದಾರರ ಪರ ವಕೀಲರು, ಪ್ರಕರಣದ ತನಿಖಾಧಿಕಾರಿಯನ್ನು ವರ್ಗಾಯಿಸಲಾಗಿದೆ. ತನಿಖೆಯಲ್ಲಿ ಲೋಪದೋಷವಿದೆ, ಹಾಗಾಗಿ ಸಿಬಿಐ ತನಿಖೆ ನಡೆಸಬೇಕು, ಇಲ್ಲವೇ ತನಿಖೆಗೆ ಸ್ವತಂತ್ರ ತನಿಖಾ ತಂಡವನ್ನು ರಚಿಸಬೇಕು ಎಂದು ನ್ಯಾಯಪೀಠವನ್ನು ಕೋರಿದರು.

ಸೋಮವಾರ ಸಂಜೆ ಬಂಧನ: ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತಕ್ಕೆ (ಕೆಎಸ್‌ಡಿಎಲ್) ಕಚ್ಚಾ ತೈಲ ಪೂರೈಸುವ ಗುತ್ತಿಗೆಯ ಕಾರ್ಯಾದೇಶ ನೀಡಲು ಲಂಚಕ್ಕೆ ಬೇಡಿಕೆಯಿಟ್ಟ ಆರೋಪ ಪ್ರಕರಣದಲ್ಲಿ ಬಿಜೆಪಿ ಶಾಸಕ ಕೆ. ಮಾಡಾಳು ವಿರೂಪಾಕ್ಷಪ್ಪರನ್ನು ಲೋಕಾಯುಕ್ತ ಪೊಲೀಸರು ಸೋಮವಾರ ಸಂಜೆ ಬಂಧಿಸಿದ್ದಾರೆ. ಅತ್ತ ಆತ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾ ಮಾಡುತ್ತಿದ್ದಂತೆಯೇ ಇತ್ತ ವಿರೂಪಾಕ್ಷಪ್ಪ ಬಂಧನವಾಗಿತ್ತು.

ಲೋಕಾಯುಕ್ತ ಪೊಲೀಸರು ದಾಖಲಿಸಿದ್ದ ಎಫ್‌ಐಆರ್‌ನಲ್ಲಿ ಮೊದಲ ಆರೋಪಿಯಾಗಿರುವ ಚನ್ನಗಿರಿಯ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆ ನಡೆಸಿ, ಮಾರ್ಚ್ 17ರಂದು ಕಾಯ್ದಿರಿಸಿದ್ದ ಆದೇಶವನ್ನು ನ್ಯಾಯಮೂರ್ತಿ ಕೆ. ನಟರಾಜನ್ ಅವರ ನೇತೃತ್ವದ ಏಕಸದಸ್ಯ ಪೀಠವು ಸೋಮವಾರ ಆದೇಶ ಪ್ರಕಟಿಸಿತ್ತು. ಮಾರ್ಚ್ 7ರಂದು ಮಾಡಾಳ್ ವಿರೂಪಾಕ್ಷಪ್ಪ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಾಲಯವು ಅವರಿಗೆ ಮಧ್ಯಂತರ ನಿರೀಕ್ಷಣಾ ಜಾಮೀನು ಮಂಜೂರು ಮಾಡಿತ್ತು. 5 ಲಕ್ಷ ರೂಪಾಯಿ ವೈಯಕ್ತಿಕ ಬಾಂಡ್ ಸಲ್ಲಿಸಬೇಕು. ಆದೇಶವಾದ 48 ಗಂಟೆಗಳ ಒಳಗೆ ತನಿಖಾಧಿಕಾರಿಯ ಮುಂದೆ ಹಾಜರಾಗಬೇಕು. ತನಿಖೆಗೆ ಎಲ್ಲಾ ರೀತಿಯಲ್ಲೂ ಸಹಕಾರ ನೀಡಬೇಕು. ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಸಾಕ್ಷ್ಯ ನಾಶಕ್ಕೆ ಯತ್ನಿಸಬಾರದು ಎಂಬ ಷರತ್ತುಗಳನ್ನು ವಿಧಿಸಿತ್ತು. ಆನಂತರ ಮಾರ್ಚ್ 17ರಂದು ವಾದ–ಪ್ರತಿವಾದ ಆಲಿಸಿದ್ದ ನ್ಯಾಯಾಲಯವು ಆದೇಶ ಕಾಯ್ದಿರಿಸಿತ್ತು. ಪ್ರಕರಣದಲ್ಲಿ ಮಾಡಾಳ್ ವಿರೂಪಾಕ್ಷಪ್ಪ ಮತ್ತು ಪುತ್ರ ಪ್ರಶಾಂತ್ ಮಾಡಾಳ್ ಅವರ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಕಾಯಿದೆ ಸೆಕ್ಷನ್ 7(ಎ), 7ಬಿ ಅಡಿ ಪ್ರಕರಣ ದಾಖಲಿಸಲಾಗಿದ್ದು, ಶಾಸಕ ವಿರೂಪಾಕ್ಷಪ್ಪ ಅವರನ್ನು ಮೊದಲ ಆರೋಪಿ, ಪುತ್ರ ಪ್ರಶಾಂತ್ ಅವರನ್ನು ಎರಡನೇ ಆರೋಪಿಯನ್ನಾಗಿಸಲಾಗಿದೆ. ಅಲ್ಲದೇ, ಸಿದ್ದೇಶ್, ನಿಕೋಲಸ್ ಮತ್ತು ಗಂಗಾಧರ್ ಎಂಬ ಮೂವರನ್ನೂ ಪ್ರಕರಣದಲ್ಲಿ ಆರೋಪಿಗಳನ್ನಾಗಿಸಲಾಗಿದೆ.

ಪ್ರಕರಣದ ಹಿನ್ನೆಲೆ: ಬೆಂಗಳೂರಿನ ಶ್ರೇಯಸ್ ಕಶ್ಯಪ್ ಅವರು ಕೆ. ಆರ್. ರಸ್ತೆಯಲ್ಲಿ ಕೆಮಿಕಲ್ಸ್ ಕಾರ್ಪೊರೇಶನ್ ಎಂಬ ಪಾಲುದಾರಿಕೆ ಕಂಪೆನಿ ಹೊಂದಿದ್ದು, ಅವರ ಪರಿಚಯಸ್ಥರಾದ ಟಿ. ಎ. ಎಸ್ ಮೂರ್ತಿ ಅವರು ಚಾಮರಾಜಪೇಟೆಯಲ್ಲಿ ಡೆಲಿಸಿಯಾ ಕೆಮಿಕಲ್ಸ್ ಎಂಬ ಪಾಲುದಾರಿಕೆ ಕಂಪೆನಿ ಹೊಂದಿದ್ದಾರೆ. ಈ ಕಂಪೆನಿಗಳು ಕೆಎಸ್‌ಡಿಎಲ್ ರಾಸಾಯನಿಕ ಆಯಿಲ್ ಪೂರೈಸಲು 2023ರ ಜನವರಿಯಲ್ಲಿ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ಯಶಸ್ವಿಯಾಗಿದ್ದವು. ಈ ಸಂಬಂಧ ಕಾರ್ಯಾದೇಶ ಮತ್ತು ಹಣ ಬಿಡುಗಡೆ ಮಾಡಿಸಲು 81 ಲಕ್ಷ ಲಂಚ ರೂ. ನೀಡುವಂತೆ ಮಾಡಾಳ್ ವಿರೂಪಾಕ್ಷಪ್ಪ ಮತ್ತು ಪ್ರಶಾಂತ್ ಅವರು ಬೇಡಿಕೆ ಇಟ್ಟಿದ್ದಾರೆ ಎಂದು ಶ್ರೇಯಸ್ ಕಶ್ಯಪ್ ಬೆಂಗಳೂರಿನ ಲೋಕಾಯುಕ್ತ ಪೊಲೀಸ್ ವಿಭಾಗಕ್ಕೆ ದೂರು ನೀಡಿದ್ದರು. ಕುಮಾರ ಪಾರ್ಕ್‌ನ ಕ್ರೆಸೆಂಟ್ ರಸ್ತೆಯಲ್ಲಿರುವ ಖಾಸಗಿ ಕಚೇರಿಗೆ ಗುತ್ತಿಗೆದಾರ 40 ಲಕ್ಷ ರೂ. ಲಂಚದ ಹಣ ತಲುಪಿಸುವ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸರು ದಾಳಿ ಮಾಡಿ ಮಾಡಾಳ್ ಪ್ರಶಾಂತ್ ಸೇರಿ ಐವರನ್ನು ಬಂಧಿಸಿದ್ದರು.

# ಪ್ರಜಾಪ್ರಭುತ್ವ ಉಳಿಸಿ: ರಾಹುಲ್ ಬೆಂಬಲಕ್ಕೆ ನಿಂತ 1000 ಕಲಾವಿದರು

ನವದೆಹಲಿ: ಮಾನನಷ್ಟ ಮೊಕದ್ದಮೆಯಲ್ಲಿ ರಾಹುಲ್ ಗಾಂಧಿ ದೋಷಿ ಮತ್ತು ನಂತರದ ಲೋಕಸಭೆಯಿಂದ ಅವರನ್ನು ಅನರ್ಹಗೊಳಿಸಿರುವುದನ್ನು ವಿರೋಧಿಸಿ ಸುಮಾರು 1,000 ರಾಜಕಾರಣಿಗಳು, ಶಿಕ್ಷಕರು, ಕಲಾವಿದರು, ವಿಜ್ಞಾನಿಗಳು, ಸಾಂಸ್ಕೃತಿಕ ಕಾರ್ಯಕರ್ತರು ರಾಹುಲ್ ಗಾಂಧಿ ಅವರ ಬೆಂಬಲಕ್ಕೆ ನಿಂತಿದ್ದಾರೆ. ಶಿಕ್ಷಣ ತಜ್ಞ



ಅಪೂರ್ವಾನಂದ್ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಸಹಿ ಮಾಡಿದವರ ಪರವಾಗಿ ವಿಜ್ಞಾನಿ ಗೌಹರ್ ರಜಾ ಮತ್ತು ಕಾರ್ಯಕರ್ತೆ ಶಬ್ನಮ್ ಹಶ್ಮಿ, ಸಂಸದೀಯ ಪ್ರಜಾಪ್ರಭುತ್ವವನ್ನು ಆಡಳಿತ ಪಕ್ಷದಿಂದ ಉಳಿಸಲು ಎಲ್ಲಾ ಕ್ರಮಗಳನ್ನು ತೆಗೆದು ಕೊಳ್ಳುವಂತೆ ಜನರಿಗೆ ಅವರು ಕರೆ ನೀಡಿದ್ದಾರೆ.

ರಾಹುಲ್ ಗಾಂಧಿ ವಿರುದ್ಧದ ಅನರ್ಹತೆಯ ಕ್ರಮವನ್ನು ಪ್ರತಿಪಕ್ಷದ ಮಾನಹಾನಿ ಮತ್ತು ಅಪರಾಧೀಕರಣ ಮತ್ತು ಸಂಪೂರ್ಣ ಪ್ರಜಾಪ್ರಭುತ್ವ ರಚನೆಯನ್ನು ಕೆಡವುವ ಭಾಗವಾಗಿ ನೋಡಬೇಕಾಗಿದೆ. ಸಂಸದೀಯ ಪ್ರಜಾಪ್ರಭುತ್ವವನ್ನು ಅದರ ಸ್ವಂತ ಹಿತಾಸಕ್ತಿಗಳಲ್ಲಿ ಉಳಿಸಲು ಪ್ರತಿಪಕ್ಷಗಳನ್ನು ರಕ್ಷಿಸಲು ನಾವು ಈ ಸಂದರ್ಭಕ್ಕೆ ಏರಲು ಮತ್ತು ಪ್ರತಿಪಕ್ಷಗಳನ್ನು ರಕ್ಷಿಸಲು ಜನರಿಗೆ ಮನವಿ ಮಾಡುತ್ತೇವೆ ಅವರು ಹೇಳಿದರು.

ಪ್ರತಿಪಕ್ಷಗಳು ತಮ್ಮ ರಾಜಕೀಯ ಕೃತ್ಯಗಳನ್ನು ಕ್ರಿಮಿನಲ್ ಮಾಡುವ ಮೂಲಕ ತಮ್ಮ ಕೆಲಸವನ್ನು ನಿಷ್ಕ್ರಿಯಗೊಳಿಸಲು ಎಲ್ಲಾ ಸಂಸ್ಥೆಗಳನ್ನು ಬಳಸಿದರೆ ಪ್ರಜಾಪ್ರಭುತ್ವವು ಸಾಯುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಯಶವಂತ್ ಸಿನ್ಹಾ ಮತ್ತು ಮಣಿಶಂಕರ್ ಅಯ್ಯರ್, ಮಹಾತ್ಮ ಗಾಂಧಿಯವರ ಮರಿ ಮೊಮ್ಮಗ ತುಷಾರ್ ಗಾಂಧಿ ಮತ್ತು ಇತಿಹಾಸಕಾರರಾದ ಮೃದುಲಾ ಮುಖರ್ಜಿ, ಆದಿತ್ಯ ಮುಖರ್ಜಿ ಮತ್ತು ಎಸ್ ಇರ್ಫಾನ್ ಹಬೀಬ್ ಅವರು ಸಹಿ ಹಾಕಿರುವ ಹೇಳಿಕೆಯಲ್ಲಿ ರಾಹುಲ್ ವಿರುದ್ಧದ ಕ್ರಮವು ಭಾರತದ ರೀತಿಯನ್ನು ಗಂಭೀರ ಪ್ರಶ್ನೆಗಳನ್ನು ಎತ್ತುತ್ತದೆ ಎಂದು ಹೇಳಿದರು. ಈ ಎರಡು ಕಾಯ್ದೆಗಳನ್ನು ಸಮರ್ಥಿಸುವ ವಾದ ಏನೇ ಇರಲಿ, ರಾಹುಲ್ ಗಾಂಧಿ ಅವರು ಸಂಸತ್ತಿನ ಒಳಗೆ ಮತ್ತು ಹೊರಗೆ ಸರ್ಕಾರದ ವಿರುದ್ಧ ನಿರಂತರ ಟೀಕೆಗೆ ಗುರಿಯಾಗಿದ್ದಾರೆ ಎಂಬುದು ಸ್ಪಷ್ಟವಾಗಿದೆ ಎಂದು ಹೇಳಿಕೆಗೆ ಕಾರ್ಯಕರ್ತರಾದ ಸೈಯದಾ ಹಮೀದ್ ಮತ್ತು ರಾಮ್ ಪುನಿಯಾನಿ ಇತರರು ಸಹಿ ಹಾಕಿದ್ದಾರೆ. ರಾಹುಲ್ ಗಾಂಧಿ ವಿರುದ್ಧ ಕ್ರಮವು ಭಾರತೀಯ ಪ್ರಜಾಪ್ರಭುತ್ವದ ಮೇಲಿನ ಆಕ್ರಮಣ ಎಂದು ಒತ್ತಿಹೇಳಿರುವ ಅವರು ಪ್ರತಿಪಕ್ಷಗಳು ಜನರ ಪರವಾಗಿ ಮಾತನಾಡುವ ಮತ್ತು ಅದರ ಕೃತ್ಯಗಳಿಗೆ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡುವ ಕರ್ತವ್ಯ ವನ್ನು ನಾವು ಒತ್ತಿಹೇಳಬೇಕಾಗಿದೆ. ಒಂದು ವೇಳೆ ಅದು ಆಗದಿದ್ದರೆ ಪ್ರಜಾಪ್ರಭುತ್ವವು ಸಾಯುತ್ತದೆ. ನ್ಯಾಯಾಂಗ ಸೇರಿದಂತೆ ಎಲ್ಲಾ ರಾಜ್ಯ ಸಂಸ್ಥೆಗಳನ್ನು ವಿರೋಧ ಪಕ್ಷವು ತನ್ನ ರಾಜಕೀಯ ಕೃತ್ಯಗಳನ್ನು ಅಪರಾಧೀಕರಿಸುವ ಮೂಲಕ ತನ್ನ ಕೆಲಸವನ್ನು ಮಾಡದಂತೆ ನಿಷ್ಕ್ರಿಯಗೊಳಿಸಲು ಬಳಸಲಾಗುತ್ತದೆ ಎಂದರು. ವಿವಿಧ ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ಪ್ರತಿಪಕ್ಷ ನಾಯಕರನ್ನು ಜೈಲಿಗೆ ಹಾಕುವ ಮೂಲಕ ನಿರಂತರ ಕಿರುಕುಳ ನೀಡುತ್ತಿರುವುದನ್ನು ನಾವು ಕಳವಳದಿಂದ ನೋಡಿದ್ದೇವೆ. ಆಡಳಿತ ಪಕ್ಷದಿಂದ ಸಂಸತ್ತಿನ ಅಭೂತಪೂರ್ವ ಅಡ್ಡಿಯಿಂದ ನಾವು ವಿಚಲಿತರಾಗಿದ್ದೇವೆ. ವಿರೋಧ ಪಕ್ಷದ ನಾಯಕರು ಸಂಸತ್ತಿನ ವೇದಿಕೆಯನ್ನು ಜನರ ಕಳವಳಗಳನ್ನು ಬಿತ್ತರಿಸಲು ಅವಕಾಶ ನೀಡುವುದು ಪ್ರಜಾಪ್ರಭುತ್ವದ ಬುಡಮೇಲು ಆಗುತ್ತದೆ ಎಂದು ಅವರು ತಿಳಿಸಿದ್ದಾರೆ. ಕಾನೂನು ಮತ್ತು ನ್ಯಾಯಾಂಗದ ಸ್ವಾತಂತ್ರ್ಯವನ್ನು ಗೌರವಿಸುವುದು ಯಾವುದೇ ಪ್ರಜಾಪ್ರಭುತ್ವದ ಮೂಲಾಧಾರ ವಾಗಿದೆ ಎಂದು ಯುನೈಟೆಡ್ ಸ್ಟೇಟ್ಸ್ ಮಂಗಳವಾರ ಹೇಳಿದೆ. ಭಾರತದ ನ್ಯಾಯಾಲಯಗಳಲ್ಲಿ ನಡೆಯುತ್ತಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಪ್ರಕರಣವನ್ನು ಅಮೆರಿಕಾ ವೀಕ್ಷಿಸುತ್ತಿದೆ ಎಂದು ವಕ್ತಾರರು ತಿಳಿಸಿದ್ದಾರೆ.

# ಬಿಜೆಪಿ ಸರ್ಕಾರ ಶೀಘ್ರ ನಿರ್ಗಮಿಸಿದರೆ ರಾಜ್ಯಕ್ಕೆ ಒಳಿತು: ಡಿಕೆಶಿ

ಬೆಂಗಳೂರು: ಬಸವರಾಜ್ ಬೊಮ್ಮಾಯಿ ನೇತೃತ್ವದ ಸರ್ಕಾರವನ್ನು ಆದಷ್ಟು ಬೇಗ ವಜಾ ಮಾಡಿದರೆ ರಾಜ್ಯಕ್ಕೆ ಒಳ್ಳೆಯದು ಎಂದು ಕರ್ನಾಟಕ ಕಾಂಗ್ರೆಸ್ ಮುಖ್ಯಸ್ಥ ಡಿಕೆ ಶಿವಕುಮಾರ್ ಬುಧವಾರ ವಾಗ್ದಾಳಿ ನಡೆಸಿದರು. ಕೆಪಿಸಿಸಿ ಅಧ್ಯಕ್ಷ ಶಿವಕುಮಾರ್ ಅವರು ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ಸಿದ್ಧತೆಯ ಬಗ್ಗೆ ಮಾತನಾಡಿ, ಕಾಂಗ್ರೆಸ್ ಚುನಾವಣೆಗೆ ಸಿದ್ಧವಾಗಿದೆ. ಈ ಸರ್ಕಾರವನ್ನು ಆದಷ್ಟು ಬೇಗ ಕೊನೆಗೊಳಿಸಬೇಕೆಂದು ನಾವು ಬಯಸುತ್ತೇವೆ. ಈ ಸರ್ಕಾರವನ್ನು ಆದಷ್ಟು ಬೇಗ ವಜಾಗೊಳಿಸಿದರೆ, ಅದು ರಾಜ್ಯ ಮತ್ತು ದೇಶಕ್ಕೆ ಒಳ್ಳೆಯದು.

ಈ ಚುನಾವಣೆಯು ಅಭಿವೃದ್ಧಿ ಆಧಾರಿತ ಮತ್ತು ಭ್ರಷ್ಟಾಚಾರ ಮುಕ್ತ ರಾಜ್ಯ ಮತ್ತು ದೇಶಕ್ಕಾಗಿ ನಡೆಯಲಿದೆ ಎಂದು ಶಿವಕುಮಾರ್ ಎಂದು ಸುದ್ದಿಗಾರರಿಗೆ ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಡಿಕೆ ಶಿವಕುಮಾರ್ ಅವರು ಕರ್ನಾಟಕದಲ್ಲಿ ಭ್ರಷ್ಟ ಚಟುವಟಿಕೆಗಳಿಗೆ ಅವರು ಅನುವು ಮಾಡಿಕೊಳ್ಳುತ್ತಿದ್ದಾರೆ. 'ಭ್ರಷ್ಟಾಚಾರ ಉತ್ತುಂಗದಲ್ಲಿ ರುವುದರಿಂದ ಈ ಚುನಾವಣೆ ಮಾದರಿಯಾಗಲಿದೆ. ಮೋದಿ ಭ್ರಷ್ಟಾಚಾರಕ್ಕೆ ಉತ್ತೇಜನ ನೀಡಿ ಬಾಯಿಬಿಡಲಿಲ್ಲ. ತಮ್ಮ ಪಕ್ಷದ ನಾಯಕರ ಮೇಲೆ ಯಾವುದೇ ಕ್ರಮಕೈಗೊಂಡಿಲ್ಲ. ಪಕ್ಷಕ್ಕಾಗಿಯೇ ಸಾಕಷ್ಟು ಭ್ರಷ್ಟ ಚಟುವಟಿಕೆಗಳಲ್ಲಿ ರಾಜಿ ಮಾಡಿಕೊಳ್ಳುತ್ತಿದ್ದಾರೆ. ಬಿಜೆಪಿ ಎಂದಿಗೂ ಯುವಕರಿಗೆ ಉದ್ಯೋಗ ನೀಡಿಲ್ಲ, ನಮ್ಮ ಸ್ವಚ್ಛ ಆಡಳಿತ ನಮ್ಮ ಪಕ್ಷವನ್ನು ಅಧಿಕಾರಕ್ಕೆ ತರುತ್ತದೆ ಎಂದರು.



ವಿಧಾನಸಭೆಯಲ್ಲಿ 224 ಸ್ಥಾನಗಳನ್ನು ಹೊಂದಿರುವ ಕರ್ನಾಟಕವು ಪ್ರಸ್ತುತ ಆಡಳಿತಾರೂಢ ಬಿಜೆಪಿಯ 119 ಶಾಸಕರನ್ನು ಹೊಂದಿದ್ದರೆ, ಕಾಂಗ್ರೆಸ್ 75 ಮತ್ತು ಅದರ ಮಿತ್ರ ಜೆಡಿಎಸ್ (ಎಸ್) 28 ಸ್ಥಾನಗಳನ್ನು ಹೊಂದಿದೆ. ಅಸೆಂಬ್ಲಿ ಚುನಾವಣೆಗೆ ತಿಂಗಳುಗಳು ಬಾಕಿ ಇರುವಾಗ ಆಡಳಿತಾರೂಢ ಬಿಜೆಪಿ, ಕಾಂಗ್ರೆಸ್ ಮತ್ತು ಮಿತ್ರಪಕ್ಷ ಜೆಡಿಎಸ್ (ಎಸ್) ಸೇರಿದಂತೆ ರಾಜಕೀಯ ಪಕ್ಷಗಳು ಆರೋಪ ಮತ್ತು ಪ್ರತ್ಯಾರೋಪಗಳ ಸುರಿಮಳೆಯನ್ನು ಪ್ರಾರಂಭಿಸಿದವು, ನಂತರ ಭ್ರಷ್ಟಾಚಾರದ ವಿಷಯದ ಮೇಲೆ ಸರ್ಕಾರವನ್ನು ಮೂಲೆ ಗುಂಪು ಮಾಡಲು ಪ್ರಯತ್ನಿಸಿದವು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವು ಮತ್ತೆ ಅಧಿಕಾರಕ್ಕೆ ಬರಲು ಪ್ರಯತ್ನಗಳನ್ನು ನಡೆಸುತ್ತಿದೆ.


ಚುನಾವಣೆ ದಿನಾಂಕ ಘೋಷಣೆಯಾಗುವ ಮೊದಲೇ ಮುಸ್ಲಿಂ ಸಮುದಾಯಕ್ಕೆ ಧರ್ಮಾಧಾರಿತ ಮೀಸಲಾತಿಯನ್ನು ರದ್ದುಪಡಿಸುವ ಮೂಲಕ ಕನ್ನಡಿಗರ ಸಮಸ್ಯೆ, ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯಗಳಿಗೆ ಮೀಸಲಾತಿಗೆ ಒತ್ತು ನೀಡುತ್ತಿದೆ. ಹೊಸ ನಿರ್ಧಾರವನ್ನು ರಾಜ್ಯ ಸರ್ಕಾರ ಇತ್ತೀಚೆಗೆ ತೆಗೆದುಕೊಂಡಿದೆ. ಕನ್ನಡಿಗರಿಗೆ ಮೊದಲ ಆದ್ಯತೆ ನೀಡದ ಕಂಪನಿಗಳು ಪ್ರೋತ್ಸಾಹಧನಕ್ಕೆ ಅರ್ಹರಾಗಿರುವುದಿಲ್ಲ ಎಂದು ಸರ್ಕಾರ ಕಳೆದ ವರ್ಷ ಪ್ರಸ್ತಾಪಿಸಿತ್ತು. ಕನ್ನಡವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸರ್ಕಾರದ ಈ ಕ್ರಮವು ಕಳೆದ ವರ್ಷದ ಕೊನೆಯ ಭಾಗದಲ್ಲಿ ಬಂದಿತು. ಇದನ್ನು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಮಸೂದೆಯಲ್ಲಿ ಸೇರಿಸಲಾಗಿದೆ. ಏತನ್ಮಧ್ಯೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕರ್ನಾಟಕಕ್ಕೆ ಹಲವು ಬಾರಿ ಭೇಟಿ ನೀಡಿದ್ದಾರೆ.

ಕರ್ನಾಟಕವನ್ನು ಅವರು ಹಲವಾರು ಸಂದರ್ಭ ಗಳಲ್ಲಿ ಬಿಜೆಪಿಯ ದಕ್ಷಿಣಕ್ಕೆ ಹೆಬ್ಬಾಗಿಲು ಎಂದು ಬಣ್ಣಿಸಿದ್ದಾರೆ. ಸೋಮವಾರ ಬೆಂಗಳೂರಿನಲ್ಲಿ ರಾಜ್ಯ ಬಿಜೆಪಿ ಕೋರ್ ಕಮಿಟಿ ಮತ್ತು ಚುನಾವಣಾ ನಿರ್ವಹಣಾ ಸಮಿತಿಯೊಂದಿಗೆ ಅಮಿತ್ ಶಾ ಸೋಮವಾರ ಸಭೆ ನಡೆಸಿದ್ದಾರೆ. ಭಾನುವಾರದಂದು ಅಮಿತ್ ಶಾ ಅವರು ಕರ್ನಾಟಕದ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಮತ್ತು ಅವರ ನಿಕಟಪೂರ್ವ ಮತ್ತು ಬಿಜೆಪಿ ಹಿರಿಯ ಬಿಎಸ್ ಯಡಿಯೂರಪ್ಪ ಅವರನ್ನು ಶ್ಲಾಘಿಸಿದ್ದರು. ಇಬ್ಬರೂ ತಮ್ಮ ಅಧಿಕಾರಾವಧಿಯಲ್ಲಿ ಉತ್ತಮ ಆಡಳಿತ ನೀಡಿದ್ದಾರೆ ಎಂದು ಹೇಳಿದ್ದರು.

ಎರಡೂ ಮುಖ್ಯಮಂತ್ರಿಗಳ ಅಡಿಯಲ್ಲಿ ಬಿಜೆಪಿ ಸರ್ಕಾರ ಮಾಡಿದ ಅಭಿವೃದ್ಧಿ ಕಾರ್ಯಗಳನ್ನು ಉಲ್ಲೇಖಿಸಿದ ಅಮಿತ್ ಶಾ, ಈ ವರ್ಷ ನಡೆಯಲಿರುವ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪೂರ್ಣ ಬಹುಮತದೊಂದಿಗೆ ಬಿಜೆಪಿ ಸರ್ಕಾರಕ್ಕೆ ಬೆಂಬಲ ಸೂಚಿಸುವಂತೆ ಜನರನ್ನು ಒತ್ತಾಯಿಸಿದರು.

# ಎಸ್.ಸಿ ಪಟ್ಟಿಯಿಂದ ಯಾರನ್ನೂ ತೆಗೆಯುವ ಪ್ರಶ್ನೆ ಇಲ್ಲ; ಕಾಂಗ್ರೆಸ್ ಪ್ರೇರಿತ ರಾಜಕೀಯ ಕುತಂತ್ರ: ಸಿಎಂ ಬೊಮ್ಮಾಯಿ

ಬೆಂಗಳೂರು: ಎಸ್.ಸಿ ಪಟ್ಟಿಯಿಂದ ಕೈಬಿಡುವುದಾಗಿ ಕಾಂಗ್ರೆಸ್ ರಾಜಕೀಯ ಪ್ರೇರಿತ ಕುತಂತ್ರ ಮಾಡಿದ್ದು ಯಾರನ್ನೂ ತೆಗೆಯುವ ಪ್ರಶ್ನೆ ಇಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು. ಈ ಕುರಿತು ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಸ್.ಸಿ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಸಮುದಾಯಗಳಿಗೆ ಕಾಂಗ್ರೆಸ್‌ನವರು ಸುಳ್ಳು ಮಾಹಿತಿ ಕೊಡುತ್ತಿದ್ದಾರೆ. ಬಂಜಾರ, ಭೋವಿ, ಕೊರಚ ಯಾರನ್ನೂ ಕೂಡ ಪಟ್ಟಿಯಿಂದ ತೆಗೆಯಲಾಗುವುದಿಲ್ಲ. ಈ ಬಗ್ಗೆ ಫೆಬ್ರವರಿ ಮಾಹೆಯಲ್ಲಿ ಕೇಂದ್ರ ಸರ್ಕಾರಕ್ಕೆ ಮಾಹಿತಿ ನೀಡಲಾಗಿದೆ. ಇವರೆಲ್ಲಾ ಮಹಾರಾಜರ ಕಾಲದಿಂದಲೂ



ಇರುವಂಥ ಸಮುದಾಯಗಳು. ಸಂವಿಧಾನ ಆದ ನಂತರ ಇದ್ದ ಆರು ಸಮುದಾಯಗಳಲ್ಲಿ ಇವೂ ಇದ್ದು, ಇದನ್ನು ತೆಗೆಯುವ ಪ್ರಶ್ನೆಯೇ ಇಲ್ಲ ಎಂದು ಆಧಾರ ಸಮೇತವಾಗಿ ನೀಡಲಾಗಿದೆ.

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಎರಡೂ ಪಕ್ಷಗಳ ವರಿಷ್ಠರು ಆಫರ್ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಅವರಿಗೆ ಯಾರು ಯಾವಾಗ ಏನು ಕೊಡುಗೆ ನೀಡುತ್ತಾರೆ, ಅವರು ಏನು ಸ್ವೀಕಾರ ಮಾಡುತ್ತಾರೆ ಎಂದು ಅವರಿಗೇ ಗೊತ್ತು ಎಂದರು. ನಾವು ಬೇರೆ ಪಕ್ಷಗಳ ರೀತಿ ಸುಳ್ಳು ಅಂಕಿ ಸಂಖ್ಯೆಗಳನ್ನು ಹೇಳುವುದಿಲ್ಲ. ನಮಗೆ ಎಲ್ಲಾ ಸಮೀಕ್ಷೆಗಳ ವರದಿ ಬಂದಿದ್ದು, ನಾವು ಬೇರೆ ಪಕ್ಷಗಳಿಗಿಂತ ಮುಂದಿದ್ದೇವೆ ಎಂದರು. ಇದು ಪಕ್ಷದ ಆಂತರಿಕ ವಿಚಾರವಾಗಿದ್ದು, ಬಹಿರಂಗ ಪಡಿಸಲು ಆಗುವುದಿಲ್ಲ ಎಂದರು. ಕಳೆದ ಬಾರಿ 27 ನೇ ತಾರೀಖು ಚುನಾವಣೆ ಘೋಷಣೆಯಾಗಿತ್ತು. 27 ರ ನಂತರ ಯಾವ ದಿನವಾದರೂ ಚುನಾವಣಾ ದಿನಾಂಕ ಘೋಷಣೆಯಾಗುವ ನಿರೀಕ್ಷೆಯಿತ್ತು. ನೀತಿ ಸಂಹಿತೆ ಕೂಡ ಜಾರಿಯಾಗಲಿದ್ದು, ಎಲ್ಲಾ ಪಕ್ಷಗಳೂ ನೀತಿ ಸಂಹಿತೆಯ ಪ್ರಕಾರ ನಡೆದುಕೊಳ್ಳಬೇಕಾಗುತ್ತದೆ. ಸ್ವತಂತ್ರ ಮತ್ತು ನ್ಯಾಯೋಚಿತ ಚುನಾವಣೆಗೆ ಎಲ್ಲರೂ ಸಹಕರಿಸಬೇಕೆಂದು ವಿನಂತಿ ಮಾಡಿದರು. ಪ್ರಮುಖ ಅಭಿವೃದ್ಧಿ ಕಾರ್ಯ ಕ್ರಮಗಳು ನಿರಂತರವಾಗಿ ನಡೆಯುತ್ತಿರುತ್ತವೆ. ಕೆಲವು ಯೋಜನೆಗಳಿಗೆ ಅಡಿಗಲ್ಲು ಹಾಕುವುದು ಎಲ್ಲಾ ಸರ್ಕಾರಗಳ ಕಾಲದಲ್ಲಿಯೂ ಉಳಿಯುತ್ತದೆ.

ಸಾಗರ ಚುನಾವಣಾ ಚಿತ್ರಣ; ಬೇಳೂರು ಗೋಪಾಲಕೃಷ್ಣ ಪರಿಚಯ ಒಂದೂವರೆ ವರ್ಷದಲ್ಲಿ ಇಡೀ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ 5–6 ಬಾರಿ ಭೇಟಿ ನೀಡಿದ್ದು, ಕಳೆದ ಮೂರು ತಿಂಗಳಲ್ಲಿ ಪ್ರವಾಸ ಮಾಡದ ಜಿಲ್ಲೆಯೇ ಇಲ್ಲ. ನಮಗೆ ಸಂಪೂರ್ಣ ಹಾಗೂ ಸ್ಪಷ್ಟ ಬಹುಮತ ಬರುವ ವಿಶ್ವಾಸವಿದೆ. ಮತ್ತೊಮ್ಮೆ 2023 ರಲ್ಲಿ ಬಿಜೆಪಿ ಸರ್ಕಾರ ಸ್ಥಾಪನೆಯಾಗಲಿದೆ. ಚುನಾವಣಾ ಪ್ರಚಾರಕ್ಕೆ ವರಿಷ್ಠರು ಬರುತ್ತಾರೆ. ಏಪ್ರಿಲ್ 9 ರಂದು ಹುಲಿ ಕಾರ್ಯಕ್ರಮಕ್ಕೆ ಪ್ರಧಾನಿಗಳು ಮೈಸೂರಿಗೆ ಬರುವ ಕಾರ್ಯಕ್ರಮ ಮೊದಲೇ ನಿಗದಿಯಾಗಿತ್ತು. ಸರ್ಕಾರದ ಪೂರ್ವನಿಗದಿತ ಕಾರ್ಯಕ್ರಮ ಎಂದರು. ಈ ಬಾರಿಯ ಪ್ರಚಾರ ಗರಿಷ್ಠ ಜನರನ್ನು ತಲುಪುವ ಪ್ರಚಾರ. ಡಿಜಿಟಲೈಜೇಶನ್ ಬಳಕೆ, ನಾಯಕರ ವ್ಯಾಪಕ ಪ್ರಚಾರ, ಪ್ರವಾಸ, ಪ್ರತಿ ಮತದಾರರಿಗೆ ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಕೇಂದ್ರ ರಾಜ್ಯ ಸರ್ಕಾರಗಳ ಯೋಜನೆಗಳನ್ನು ತಿಳಿಸಿದ್ದಾರೆ. ಪ್ರಚಾರ ವಿವಿಧ ಹಂತಗಳಲ್ಲಿರುತ್ತದೆ. ನಾಯಕರು ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ, ರಾಷ್ಟ್ರೀಯ ನಾಯಕರು ರಾಜ್ಯ ಮಟ್ಟದಲ್ಲಿ ಪ್ರಚಾರ ಮಾಡಲಿದ್ದು, ವ್ಯಾಪಕ ಪ್ರಚಾರ ಆಗಲಿದೆ ಎಂದರು.

ಪ್ರಧಾನ ಮಂತ್ರಿಗಳ ಕಾರ್ಯಕ್ರಮ ದ ಜೊತೆಗೆ ಅಮಿತ್ ಶಾ, ಜೆ.ಪಿ.ನಡ್ಡಾ ಅವರ ಪ್ರವಾಸ ಕಾರ್ಯಕ್ರಮವನ್ನು ಸಮಿತಿಗಳಲ್ಲಿ ನಿರ್ಧರಿಸಿ ಕರ್ನಾಟಕ ವ್ಯಾಪ್ತಿಯಲ್ಲಿ ಪ್ರಚಾರ ಮಾಡುವಾಗ ಯೋಜಿತವಾಗಿ ಮಾಡಲಾಗುವುದು. ಕಳೆದ ಬಾರಿ ಬಂದಂತೆಯೇ ಈ ಬಾರಿಯೂ ಬರಲಿದ್ದಾರೆ ಎಂದರು. ಕೆಲ ದಿನಗಳಲ್ಲಿ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆಯಾಗಲಿದೆ. ಈಗಾಗಲೇ ಸಮೀಕ್ಷೆಯ ವರದಿಗಳಿವೆ. ಅದರೊಂದಿಗೆ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಅಭಿಪ್ರಾಯಗಳನ್ನು ಪಡೆದು ರಾಜ್ಯ ಮಟ್ಟದಲ್ಲಿ ಕ್ರೂಢೀಕರಿಸಿ ಪಟ್ಟಿ ಸಂಸದೀಯ ಮಂಡಳಿಗೆ ಕಳುಹಿಸಲಾಗುವುದು. ಒಂದು ವಾರ ಪ್ರಕ್ರಿಯೆ ನಡೆಯಲಿದೆ ಎಂದರು. ಕೆ.ಪಿ.ಸಿ.ಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಎರಡನೇ ಪಟ್ಟಿ ಸಿದ್ಧ ಮಾಡುವಾಗ ನಮ್ಮ ಶಾಸಕರಿಗೆ ಕರೆ ಮಾಡಿದ್ದಾರೆ. ನಮ್ಮ ಶಾಸಕರನ್ನು ಸಂಪರ್ಕಿಸಿರುವುದು ಅವರ ಪರಿಸ್ಥಿತಿ ತೋರಿಸುತ್ತದೆ.

ಗಟ್ಟಿಯಾದ ಅಭ್ಯರ್ಥಿಗಳಿದ್ದಿದ್ದರೆ ನಮ್ಮ ಶಾಸಕರಿಗೆ ಕರೆ ಮಾಡುತ್ತಿರಲಿಲ್ಲ. ಸಾರಾಸಗಟಾಗಿ ಎಲ್ಲರಿಗೂ ಕರೆ ಮಾಡಿ ನಮ್ಮದಿನ್ನೂ ನಿರ್ಣಯವಾಗಿಲ್ಲ, ನೀವು ಬಂದರೆ ನಿಮಗೆ ಟಿಕೆಟ್ ಕೊಡುವುದಾಗಿ ಹೇಳಿದ್ದಾರೆ ಎಂದರು. ನಮ್ಮ ಪಕ್ಷದವರು ಅವರು ಬರುವುದಿಲ್ಲ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಗೆ ಅಭ್ಯರ್ಥಿಗಳ ಕೊರತೆ ಎದುರಾಗಿದೆ. ವಲಸಿಗರು ಸೇರಿದಂತೆ ಮೂಲ ಬಿಜೆಪಿ ಶಾಸಕರನ್ನ ಸಂಪರ್ಕ ಮಾಡಿದ್ದಾರೆ. ಈ ಬಾರಿ ಸ್ಪಷ್ಟ ಬಹುಮತದ ಮೇಲೆ ಅಧಿಕಾರಕ್ಕೆ ಬರುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಾಳೆಯಿಂದ ಜನರ ಸಮಸ್ಯೆ ಸ್ವೀಕರಿಸಲು ನೀತಿ ಸಂಹಿತೆ ಅಡ್ಡಿ ಆಗಲಿದೆ. ಇಷ್ಟು ದಿನ ಜನರ ಸೇವೆ ಮಾಡಲು ಅವಕಾಶ ದೊರೆತಿತ್ತು. ಕಾನೂನು ಪ್ರಕಾರ ನಾವು ನಡೆದುಕೊಳ್ಳಬೇಕು ಎಂದರು.

# ಇಂದಿನಿಂದಲೇ ನೀತಿ ಸಂಹಿತೆ

1ನೇ ಪುಟದಿಂದ

ನೀತಿ ಸಂಹಿತೆಯು ಸಹ ಇಂದಿನಿಂದಲೇ ಜಾರಿ ಆಗಿದೆ. ನೀತಿ ಸಂಹಿತೆ ಜಾರಿಯಾಗಿದ್ದು, ಸರ್ಕಾರಿ ಕಾರ್ಯಕ್ರಮಗಳನ್ನು ಮಾಡುವ ಹಾಗಿಲ್ಲ. ಆದ್ದರಿಂದ ಸಿಎಂ ಬಸವರಾಜ ಬೊಮ್ಮಾಯಿ ತಮ್ಮ ಸರ್ಕಾರಿ ಕಾರ್ಯ ಕ್ರಮಗಳನ್ನೆಲ್ಲ ರದ್ದುಪಡಿಸಿದ್ದಾರೆ. ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ: ಏಪ್ರಿಲ್ 20 ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕ: ಏಪ್ರಿಲ್ 24 ಮತದಾನ ದಿನಾಂಕ: ಮೇ 10 ಫಲಿತಾಂಶ ದಿನಾಂಕ: ಮೇ 13 ನವದೆಹಲಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಚುನಾವಣಾ ದಿನಾಂಕವನ್ನು ಘೋಷಣೆ ಮಾಡುವ ಸಂಬಂಧ ಪತ್ರಿಕಾ ಗೋಷ್ಠಿಯನ್ನು ವಿಜ್ಞಾನಭವನದಲ್ಲಿ ಕರೆದಿದ್ದರು. ಈ ವೇಳೆ ಎಲ್ಲಾ ಕ್ಷೇತ್ರಗಳ ಚುನಾವಣೆ ಒಂದೇ ಹಂತದಲ್ಲಿ ನಡೆಯಲಿದೆ ಎಂದು ಘೋಷಣೆ ಮಾಡಿದ್ದಾರೆ.

2018ರ ವಿಧಾನಸಭಾ ಚುನಾವಣೆಯು ಮೇ. 12, 2018 ರಂದು ನಡೆದಿತ್ತು. ಹಾಗೆಯೇ ಪ್ರಸ್ತುತ ವಿಧಾನಸಭೆಯ ಸಮಯವು ಮೇ.

24, 2023ರಂದು ಮುಕ್ತಾಯಗೊಳ್ಳಲಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಆದ್ದರಿಂದ ಇಂದು ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ ಚುನಾವಣೆಗೆ ದಿನಾಂಕ ಘೋಷಿಸಲಿದೆ.

ವೇಳಾಪಟ್ಟಿ ಪ್ರಕಟಿಸಿದ ಬಳಿಕ ರಾಜ್ಯದಲ್ಲಿ ನೀತಿಸಂಹಿತೆ ಜಾರಿ ಆಗಲಿದೆ. ಇಂದಿನಿಂದಲೇ ಕರ್ನಾಟಕದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಾಗಿದ್ದು ಸಿಎಂ ಸೇರಿದಂತೆ ಸಚಿವರು ಸರ್ಕಾರಿ ಸೌಲಭ್ಯವನ್ನು ಬಳಸುವಂತಿಲ್ಲ. ಹಾಗೂ ಸರ್ಕಾರ ಯಾವುದೇ ಹೊಸ ಯೋಜನೆ ಘೋಷಣೆ ಮಾಡುವಂತಿಲ್ಲ.

ಆದರೆ ಸಿಎಂ ಸೇರಿ ಸಚಿವರು, ಶಾಸಕರಿಗೆ ಎಂದಿನಂತೆ ಭದ್ರತೆ ಇರುತ್ತದೆ. ಎಸ್ಕಾಟ್ ಸೇರಿದಂತೆ ಎಲ್ಲಾ ರೀತಿಯ ಭದ್ರತೆ ಮುಂದುವರೆಯಲಿದೆ ಎನ್ನುವ ಮಾಹಿತಿ ಲಭ್ಯವಾಗಿದೆ.

# ಜೆಡಿಎಸ್ ನಾಯಕರು ಎರಡು ಪಕ್ಷಗಳ ಜೊತೆ ಬ್ಯಾಲೆನ್ಸ್ ಮಾಡುತ್ತಿದ್ದಾರೆ: ಸಿ.ಪಿ.ಯೋಗೇಶ್ವರ್

ರಾಮನಗರ: ರಾಜ್ಯದಲ್ಲಿ ವಿಧಾನಸಭೆ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳೂ ಆರೋಪ ಪ್ರತ್ಯಾರೋಪ ಮಾಡುವುದು ಸಾಮಾನ್ಯವಾಗಿದೆ. ಮಾಜಿ ಸಿಎಂ ಸಿದ್ದರಾಮಯ್ಯನವರು ಜೆಡಿಎಸ್ ಹಾಗೂ ಬಿಜೆಪಿ ನಡುವೆ ಹೊಂದಾಣಿಕೆ ನಡೆದಿದೆ ಎಂದು ಆರೋಪಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಈ ಬಾರಿಯ ಚುನಾವಣೆಯಲ್ಲಿ ಹೈಕಮಾಂಡ್‌ಗೆ ಕ್ಲ್ಯಾರಿಟಿ ಇದೆ. ಯಾವುದೇ ರೀತಿಯಲ್ಲೂ ಜೆಡಿಎಸ್ ಜೊತೆ ಹೊಂದಾಣಿಕೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಜೆಡಿಎಸ್ ವಿರುದ್ಧ ಸಿ.ಪಿ.ಯೋಗೇಶ್ವರ್ ಆರೋಪ ಚನ್ನಪಟ್ಟಣ ಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಸಂಕಲ್ಪ ಯಾತ್ರೆ ಮೂಲಕ ಹಲವು ಗ್ರಾಮಗಳ ಮತದಾರನ್ನು ಭೇಟಿ ಮಾಡಿದ ನಂತರ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಕೆಲವು ಕ್ಷೇತ್ರದಲ್ಲಿ ಜೆಡಿಎಸ್‌ನವರಿಗೆ ನಮ್ಮ ಪಕ್ಷದ ನಾಯಕರು ಸಹಕಾರ ನೀಡಿದ್ದು ನಿಜ. ಅದರೆ ಈ ಬಾರಿಯ ಚುನಾವಣೆಯಲ್ಲಿ ನಮ್ಮ ಹೈಕಮಾಂಡ್‌ಗೆ ಕ್ಲ್ಯಾರಿಟಿ ಇದೆ. ಜೆಡಿಎಸ್ ಪಕ್ಷದವರನ್ನು ನಂಬುವ ಪರಿಸ್ಥಿತಿ ಇಲ್ಲ. ಅವರೂ ಎರಡೂ ಪಕ್ಷಗಳ ಜೊತೆ ಬ್ಯಾಲೆನ್ಸ್ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕಳೆದ ಬಾರಿ ನಮ್ಮ ಪಕ್ಷದ ಬೆಂಬಲ ಕೋರಿದ್ದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಬಳಿಕ ಕಾಂಗ್ರೆಸ್ ಪಕ್ಷದೊಂದಿಗೆ ಸೇರಿ ಸಿಎಂ ಆದರು. ಚುನಾವಣೆ ಪೂರ್ವದಲ್ಲಿ ಜೆಡಿಎಸ್‌ಗೆ ಬೆಂಬಲ ಕೊಟ್ಟಿದ್ದು ನಾವು. ಆಮೇಲೆ ಕಾಂಗ್ರೆಸ್ ಜೊತೆ ಓಡಿಹೋಗಿ ಸಿಎಂ ಆದರು. ಹಾಗಾಗಿ ಜೆಡಿಎಸ್ ನಂಬಿಕೆಗೆ ಅರ್ಹವಲ್ಲ ಎಂದು ಸಿ.ಪಿ.ಯೋಗೇಶ್ವರ್ ಕಿಡಿಕಾರಿದರು.

ಈ ಬಾರಿಯ ಚುನಾವಣೆಯಲ್ಲಿ ಹಳೆ ಮೈಸೂರು ಭಾಗದಲ್ಲಿ ಯಾವುದೇ ಹೊಂದಾಣಿಕೆ ಆಗಬಾರದು. 70–80 ಕ್ಷೇತ್ರ ಒಳಗೊಂಡಿರುವ ಹಳೇ ಮೈಸೂರು ಭಾಗದಲ್ಲಿ ಸ್ವತಂತ್ರವಾಗಿ ಬಿಜೆಪಿ ಪಕ್ಷ ಬೆಳೆಯಬೇಕು. ಅಧಿಕಾರಕ್ಕಾಗಿ ಆಪರೇಷನ್ ಕಮಲ ಹಾಗೂ ಬೇರೆ ಪಕ್ಷದವರನ್ನು ಕರೆತರುವ ಪದ್ಧತಿ ತಪ್ಪಬೇಕು ಅಂದರೆ ಹೊಂದಾಣಿಕೆ ನಿಲ್ಲಿಸಬೇಕು. ಇದನ್ನು ನಾನು ಮೊದಲಿನಿಂದಲೂ ಹೇಳಿಕೊಂಡು ಬಂದಿದ್ದೇನೆ. ಹಾಗಾಗಿ ಈಗಲೂ ಹೊಂದಾಣಿಕೆ ಬೇಡ ಎಂಬ ಹೇಳಿಕೆಗೆ ಬದ್ಧವಾಗಿದ್ದೇನೆ ಎಂದರು.

ಕಳೆದ ಬಾರಿಯ ಚುನಾವಣೆಯಲ್ಲಿ ಜೆಡಿಎಸ್‌ಗೆ ಡ್ಯಾಮೇಜ್ ಆಗುತ್ತಿದ್ದ ಕ್ಷೇತ್ರದಲ್ಲಿ ಉತ್ತಮ ಅಭ್ಯರ್ಥಿಯನ್ನು ಹಾಕಲಿಲ್ಲ. ಕೆಲವೆಡೆ ತ್ರಿಕೋನ ಸ್ಪರ್ಧೆ ಏರ್ಪಡುತ್ತಿತ್ತು. ಆದರೆ ಪ್ರಬಲ ಅಭ್ಯರ್ಥಿಗೆ ಟಿಕೆಟ್ ಕೊಡಲಿಲ್ಲ. ಹಾಗಾಗಿ ಈಗಲೂ ಕೆಲ ಕ್ಷೇತ್ರದಲ್ಲಿ ಕಾರ್ಯಕರ್ತರಿಗೆ ಈ ಭಯ ಇದೆ. ಬಿಜೆಪಿ ನಾಯಕರ ನಡೆಯನ್ನು ಖಂಡಿಸಿದ ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್, ಇದೆಲ್ಲ ವರಿಷ್ಠರ ಗಮನಕ್ಕೆ ಬಂದಿದೆ.

# ಕುಮಾರಸ್ವಾಮಿಯನ್ನು ಎದುರಿಸಲು ಯೋಗೇಶ್ವರ್‌ಗೆ ಕಾಂಗ್ರೆಸ್ ಗಾಳ: ಜೆಡಿಎಸ್ ಸ್ಫೋಟಕ ಹೇಳಿಕೆ

ಬೆಂಗಳೂರು,: ಕರ್ನಾಟಕ ವಿಧಾನಸಭೆ ಚುನಾವಣೆಗೆ ದಿನಾಂಕಗಳು ಪ್ರಕಟಗೊಂಡಿವೆ. ಮೇ 10ರಂದು ಮತದಾನ ನಡೆಯಲಿದೆ. ಫಲಿತಾಂಶಗಳು ಮೇ 13ರಂದು ಹೊರಬೀಳಲಿವೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಕಳೆದ ಚುನಾವಣೆಯಂತೆ ಈ ಚುನಾವಣೆಯಲ್ಲಿಯೂ ಬಿಜೆಪಿ, ಕಾಂಗ್ರೆಸ್ ಹಾಗೂ ಜೆಡಿಎಸ್



ಪಕ್ಷಗಳು ತೀವ್ರ ಹಣಾಹಣಿಯಲ್ಲಿ ತೊಡಗಿವೆ.

ಬಿಜೆಪಿ ಎಂಎಲ್‌ಸಿ ಸಿಪಿ ಯೋಗೇಶ್ವರ್ ಅವರು ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಹೇಳಿಕೆ ನೀಡಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಕುಮಾರಸ್ವಾಮಿ ನೇತೃತ್ವದ ಜೆಡಿಎಸ್ ಬಿಜೆಪಿ ನಾಯಕರ ವಿರುದ್ಧ ಕಿಡಿಕಾರಿದೆ.

ಈ ವಿಚಾರವಾಗಿ ಸರಣಿ ಟ್ವೀಟ್ ಮಾಡಿರುವ ಜೆಡಿಎಸ್, 'ಬಿಜೆಪಿ ಪಕ್ಷದ ನಾಲಾಯಕರು ಹೇಳುವ ಮಾತುಗಳನ್ನೆಲ್ಲಾ ಕಾಂಗ್ರೆಸ್ ಪಕ್ಷದ ನಾಯಕರು ಸತ್ಯ ಎಂದು ಒಪ್ಪುವುದಾದರೆ, ಕರ್ನಾಟಕ ಬಿಜೆಪಿ ನಾಯಕರು ಕಾಂಗ್ರೆಸ್ ಪಕ್ಷದ ವಿರುದ್ಧ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ವಿರುದ್ಧ ಏನೆಲ್ಲಾ ಹೇಳಿದ್ದಾರೆ ಅನ್ನೋದನ್ನು ಕಾಂಗ್ರೆಸ್ ಪಕ್ಷ ಒಮ್ಮೆ ನೆನಪು ಮಾಡಿಕೊಳ್ಳಲಿ' ಎಂದು ಹೇಳಿದೆ.

'ಜಾತ್ಯತೀತ ಅನ್ನೋದನ್ನ ಸರಿಯಾಗಿ ಬರೆಯೋಕೂ ಬಾರದ ಈ ಅಧಮರಿಗೆ ಜಾತ್ಯತೀತೆಯ ಬಗ್ಗೆ ಮಾತನಾಡೋ ನೈತಿಕತೆ ಎಲ್ಲಿದೆ. ಮುಸ್ಲಿಂಮರ ಮೀಸಲಾತಿಯನ್ನು ಬಿಜೆಪಿ ಪಕ್ಷ ಕಿತ್ತುಕೊಂಡರೂ ಸೊಲ್ಲೆತ್ತದ ನಿಮಗೆ ಈ ಬಾರಿ ಮುಸ್ಲಿಂಮರು ಸರಿಯಾಗಿ ಬುದ್ದಿ ಕಲಿಸುತ್ತಾರೆ' ಎಂದು ಜೆಡಿಎಸ್ ಟ್ವೀಟ್ ಮಾಡಿದೆ. 'ಇನ್ನೂ ಚುನಾವಣೆ ಘೋಷಣೆಯೇ ಆಗಿಲ್ಲ ಆದರೂ ನಿಮ್ಮ ಪಕ್ಷದ ನಾಯಕರು ಹೆಚ್ ಡಿ ಕುಮಾರಸ್ವಾಮಿ ಅವರ ಮನೆ ಬಾಗಿಲು ತಟ್ಟುತ್ತಿದ್ದಾರೆ ಎನ್ನುವ ಸುದ್ದಿ ಮಾಧ್ಯಮಗಳಲ್ಲಿ ವರದಿಯಾಗಿದೆ, ಹೀಗಿರೋವಾಗ ನೀವು ಟ್ವಿಟರ್ ನಲ್ಲಿ ತೌಡು ಕುಟ್ಟಿದರೆ ಪುಡಿ ಸಹಾ ಉದುರುವುದಿಲ್ಲ' ಎಂದು ಟೀಕಿಸಿದೆ.

